ಕಲಬುರಗಿ–ಬೀದರ–ಯಾದಗಿರಿ–ರಾಯಚೂರು–ಕೊಪ್ಪಳ–ವಿಜಯನಗರ–ಬಳ್ಳಾರಿ–ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಿಕ ಪ್ರಸಾರ




# ನೃಪತುಂಗ

ಸಂಪಾದಕ: ಶಿವರಾಯ ಎ. ದೊಡ್ಮನಿ B.A.
ಮೋ. 9448830958

ಉಪಸಂಪಾದಕ: ಅವಿನಾಶ ಎಸ್. ದೊಡ್ಮನಿ BE. Mech
E mail: nrupatungakdaily@gmail.com

ಪ್ರಾದೇಶಿಕ ಕನ್ನಡ ದಿನಪತ್ರಿಕೆ, ಕಲಬುರಗಿ
NRUPATUNGA REGIONAL KANNADA DAILY, KALABURAGI

**ಕಡಿಮೆ ವೆಚ್ಚದಲ್ಲಿ ಹೆಚ್ಚು ಪ್ರಚಾರ**

"ನೃಪತುಂಗ" ಕನ್ನಡ ಪ್ರಾದೇಶಿಕ ದಿನ ಪತ್ರಿಕೆ ತನ್ನ ಓದುಗರ ಮತ್ತು ಜಾಹೀರಾತುದಾರರ ಹಿತಾಶಕ್ತಿ ಕಾಪಾಡಲು ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಪ್ರಚಾರಕ್ಕೆ ಅವಕಾಶ ಕಲ್ಪಿಸಿಕೊಡಲಾಗಿದೆ. ಆದ್ದರಿಂದ ಸಾರ್ವಜನಿಕರು ಇದರ ಸದುಪಯೋಗ ಪಡೆಸಿ ಕೊಳ್ಳಬೇಕು.

ಹುಟ್ಟು ಹಬ್ಬದ ಶುಭಾಶಗಳು, ಮದುವೆ ಶುಭಾಶಗಳು, ವಿದೇಶ ಪ್ರವಾಸದ ಶುಭಾಶಗಳು, ಹಬ್ಬ ಹರಿದಿನಗಳ ಶುಭಾಶಗಳು, ಮತ್ತು ನಿಧನ, ಪುಣ್ಯತಿಥಿ, ಶ್ರದ್ಧಾಂಜಲಿ ಕುರಿತು ಜಾಹೀರಾತು ನೀಡಿ ಸಹಕರಿಸಿ.

ಹೆಚ್ಚಿನ ವಿವರಗಳಿಗಾಗಿ
ಉಪಸಂಪಾದಕರು,
ಮೊ.9164300855ಕ್ಕೆ ಸಂಪರ್ಕಿಸಬಹುದು.

ಸಂಪುಟ:– 42 Volume:- 42 | ಸಂಚಿಕೆ: Issue: 72 | ದಿನಾಂಕ: 03–02–2026 ಮಂಗಳವಾರ Date: 03-02-2026 Tuesday | RNI No: 50487/89 | No:L/RNP Dlgs /08/Klb Dn/2023-2025 | ಪುಟ –8 PAGE - 8 | ಬೆಲೆ–ರೂ–3 ₹ - 3

## ಸತ್ಯ ಹೊರಬಂದರೆ ಮೋದಿ, ರಾಜನಾಥ್ ಸಿಂಗ್ ಮುಖವಾಡ ಬಯಲು: ರಾಹುಲ್

ನವದೆಹಲಿ: ಮಾಜಿ ಸೇನಾ ಮುಖ್ಯಸ್ಥ ಜನರಲ್ ಮನೋಜ್ ಮುಕುಂದ್ ನರವಾಣೆ ಅವರ ಅಪ್ರಕಟಿತ ಆತ್ಮಚರಿತ್ರೆ ಕುರಿತು ರಾಹುಲ್ ಗಾಂಧಿ ಸೋಮವಾರ (ಫೆ.2) ಲೋಕಸಭೆಯಲ್ಲಿ ಉಲ್ಲೇಖಿಸಿದ್ದು, ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ವಾಗ್ವಾದ ಉಂಟಾಯಿತು. ಗದ್ದಲ ಹೆಚ್ಚಾದ ಹಿನ್ನೆಲೆ ಸ್ಪೀಕರ್ ಓಂ ಬಿರ್ಲಾ ಕಲಾಪವನ್ನು ಇಂದಿಗೆ ಮುಂದೂಡಿದರು.

ಮಾಜಿ ಸೇನಾ ಮುಖ್ಯಸ್ಥರ ಬರಹಗಳ ಆಧಾರದ ಮೇಲೆ ಗಂಭೀರ ರಾಷ್ಟ್ರೀಯ ಭದ್ರತಾ ಸಮಸ್ಯೆಗಳ ಬಗ್ಗೆ ಮಾತನಾಡಲು ರಾಹುಲ್ ಗಾಂಧಿ ಪಟ್ಟು ಹಿಡಿದರು. ಆದರೆ, ಇದಕ್ಕೆ ಆಡಳಿತ ಪಕ್ಷದ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ ಪರಸ್ಪರ ವಾಗ್ವಾದ ಉಂಟಾಯಿತು. ಅಂತಿಮವಾಗಿ ಕಲಾಪವನ್ನು ಮುಂದೂಡಲಾಯಿತು.

"ಸದನವನ್ನು ಉದ್ದೇಶಿಸಿ ನಾನು ಸಂಕ್ಷಿಪ್ತ ಹೇಳಿಕೆ ನೀಡಲು ಬಯಸಿದ್ದೂ ಮಾತನಾಡದಂತೆ ತಡೆಯಲಾಯಿತು" ಎಂದು ಸಂಸತ್ತಿನ ಹೊರಗೆ ರಾಹುಲ್ ಗಾಂಧಿ ಹೇಳಿದರು.

"ನನಗೆ ಮಾತನಾಡಲು ಅವಕಾಶ ನೀಡುತ್ತಿಲ್ಲ. ನಾನು ಕೇವಲ 2–3 ಸಾಲುಗಳನ್ನು ಮಾತನಾಡಬೇಕಾಗಿದೆ. ಇದು ರಾಷ್ಟ್ರೀಯ ಭದ್ರತೆಯ ವಿಷಯ. ಇವು ಸೇನಾ ಮುಖ್ಯಸ್ಥ (ಮಾಜಿ) ಮಾತುಗಳು, ಅವರು ರಾಜನಾಥ್ ಸಿಂಗ್ ಮತ್ತು ಪ್ರಧಾನಿ ಮೋದಿ ಅವರೊಂದಿಗೆ ನಡೆಸಿದ ಸಂಭಾಷಣೆಯ ಮಾತುಗಳು. ಸೇನಾ ಮುಖ್ಯಸ್ಥರು (ಮಾಜಿ) ಏನು ಬರೆದಿದ್ದಾರೆ ಮತ್ತು ರಾಜನಾಥ್ ಸಿಂಗ್ ಮತ್ತು ಪ್ರಧಾನಿ



ಮೋದಿ ಅವರಿಗೆ ಯಾವ ಆದೇಶಗಳನ್ನು ನೀಡಿದ್ದರು ಎಂಬುದನ್ನು ಸದನದಲ್ಲಿ ಹೇಳಲು ನಾನು ಬಯಸುತ್ತೇನೆ " ಎಂದು ರಾಹುಲ್ ಗಾಂಧಿ ತಿಳಿಸಿದರು.

"ನನ್ನ ಮಾತಿಗೆ ಏಕೆ ಅಡ್ಡಿಪಡಿಸಲಾಗುತ್ತಿದೆ ಎಂದು ರಾಹುಲ್ ಗಾಂಧಿ ಪ್ರಶ್ನಿಸಿದ್ದು, ರಾಜಕೀಯ ನಾಯಕತ್ವವು ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುತ್ತಿದೆ" ಎಂದು ಆರೋಪಿಸಿದರು.

"ನಾನು ಸದನದಲ್ಲಿ ಮಾತನಾಡಲು ಬಯಸುತ್ತೇನೆ. ಅವರು ಏಕೆ ಹೆದರುತ್ತಿದ್ದಾರೆಂದು ನನಗೆ ತಿಳಿದಿಲ್ಲ. ಪ್ರಧಾನಿ ಏನು ಹೇಳಿದ್ದರು ಮತ್ತು ರಾಜನಾಥ್ ಸಿಂಗ್ ಅವರು ಏನು ಹೇಳಿದ್ದರು ಎಂಬುದು ಇಲ್ಲಿ ಮುಖ್ಯ ವಿಷಯ. ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆಯೋ ಇಲ್ಲವೋ, ಅದು ಬೇರೆ ಪ್ರಶ್ನೆ. ನಾವು ಅದಕ್ಕೆ ಮತ್ತೆ ಬರುತ್ತೇವೆ. ಅದಕ್ಕೂ ಮುನ್ನ ದೇಶದ ನಾಯಕ ಹೇಳಿಕೆ ನೀಡಬೇಕು. ದೇಶದ ನಾಯಕ ಹೇಳಿಕೆಯಿಂದ ತಪ್ಪಿಸಿಕೊಳ್ಳಬಾರದು ಅಥವಾ ಹೊಣೆಯಗಾರಿಕೆಯನ್ನು ಬೇರೆಯವರ ಹೆಗಲಿಗೆ ಹೊರಿಸಬಾರದು" ಎಂದರು.

ತಮ್ಮ ನಿಲುವನ್ನು ಪುನರುಚ್ಚರಿಸಿದ ರಾಹುಲ್ ಗಾಂಧಿ, ಈ ವಿಷಯವು ರಾಜಕೀಯವನ್ನು ಮೀರಿ ರಾಷ್ಟ್ರೀಯ ಹಿತಾಸಕ್ತಿಗೆ ಸಂಬಂಧಿಸಿದೆ ಎಂದು ಹೇಳಿದರು. ರಾಷ್ಟ್ರೀಯ ಭದ್ರತೆಯ ವಿಷಯವು ದೇಶಕ್ಕೆ ಅತ್ಯಂತ ಮುಖ್ಯವಾದ ವಿಷಯವೆಂದು ನಾನು ಪರಿಗಣಿಸುತ್ತೇನೆ. ಇದು ರಕ್ಷಣಾ ಸಚಿವರು, ಪ್ರಧಾನ ಮಂತ್ರಿಗಳಿಗೆ ಅನಾನುಕೂಲಕರವಾಗಿದೆ. ನರವಾಣೆ ಅವರ ಆತ್ಮಚರಿತ್ರೆಯನ್ನು ಉದ್ದೇಶಪೂರ್ವಕವಾಗಿ ತಡೆಹಿಡಿಯಲಾಗಿದೆ ಎಂದು ಹೇಳಿದರು. ಮಾಜಿ ಸೇನಾ ಮುಖ್ಯಸ್ಥರ ಅಭಿಪ್ರಾಯಗಳ ಬಗ್ಗೆ ಸರ್ಕಾರಕ್ಕಿರುವ ಅಸಮಾಧಾನವನ್ನು ಪ್ರಶ್ನಿಸಿದರು.

"ಇದು ನಾನು ಹೇಳುತ್ತಿರುವ ಮಾತಲ್ಲ, ಬದಲಿಗೆ ಮಾಜಿ ಸೇನಾ ಮುಖ್ಯಸ್ಥರು ತಮ್ಮ ಪುಸ್ತಕದಲ್ಲಿ ಬರೆದಿರುವ ವಿಷಯವಾಗಿದೆ. ಈ ಪುಸ್ತಕವನ್ನು ಪ್ರಕಟಿಸಲು ಸರ್ಕಾರ ಅನುಮತಿ ನೀಡುತ್ತಿಲ್ಲ, ಇದರಿಂದಾಗಿ ಅದು ಹಾಗೆಯೇ ಉಳಿದುಹೋಗಿದೆ. ಇದು ಒಬ್ಬ ಮಾಜಿ ಸೇನಾ ಮುಖ್ಯಸ್ಥರ ದೃಷ್ಟಿಕೋನವಾಗಿದ್ದು, ಅವರ ಈ ವಿಚಾರ ಗಳಿಗೆ ಸರ್ಕಾರವೇಕೆ ಇಷ್ಟೊಂದು ಹೆದರುತ್ತಿದೆ? (7ನೇ ಪುಟಕ್ಕೆ)



ಕಲಬುರಗಿ: ಶಾಂತಿ ಮತ್ತು ಕರುಣೆಯ ಮಹಾಯಾತ್ರೆಯಲ್ಲಿ ಭಾಗವಹಿಸಲು ಥೈಲ್ಯಾಂಡ್ ದೇಶದಿಂದ ಆಗಮಿಸಿರುವ ಬೌದ್ಧ ಅನುಯಾಯಿಗಳನ್ನು ಗುಬ್ಬಿ ಕಾಲೋನಿಯ ನಿವಾಸಿಗಳು ಆತ್ಮೀಯವಾಗಿ ಬರಮಾಡಿ ಕೊಂಡರು ಚಿತ್ರದಲ್ಲಿ ಎಡದಿಂದ ಮಹಾದೇವಪ್ಪ ಯಾಕಪುರ, ಜಿಲ್ಲಾ ಕಾಂಗ್ರೆಸ್ ಎಸ್‌ಎಸ್ಟಿ ಘಟಕದ ಅಧ್ಯಕ್ಷರಾದ ಮಹಾಂತಪ್ಪ ಸಂಗಾವಿ, ಮಾಜಿ ಜಿ.ಪಂ ಸದಸ್ಯರಾದ ಭೀಮರಾವ. ಟಿ. ಟಿ, ನಿವೃತ್ತ ಬ್ಯಾಂಕ ಅಧಿಕಾರಿಗಳಾದ ಶಿವಶರಣಪ್ಪ ಅನ್ವಾರ, ಮಾಜಿ ಜಿಪಂ ಸದಸ್ಯರಾದ ಶಂಭುಲಿಂಗ ಗುಂಡಗುರ್ತಿ, ಎಂ.ಬಿ. ಚಟ್ನಳ್ಳಿ, ವಿಠ್ಠಲ ಗೋಳಾ, ಈಶ್ವರ ಮಲಕೂಡಕರ್ ಸೇರಿದಂತೆ ಅನೇಕ ಬೌದ್ಧ ಉಪಾಸಕರು ಉಪಸ್ಥಿತರಿದ್ದರು.

## 9ರಂದು ರಾಜ್ಯಾದ್ಯಂತ ಪ್ರತಿಭಟನೆ: ಡಿ.ಜಿ.ಸಾಗರ



ಕಲಬುರಗಿ: ಎಸ್.ಸಿ ಮತ್ತು ಎಸ್.ಟಿ.ವಿದ್ಯಾರ್ಥಿಗಳ ಮೇಲೆ ವಿಶ್ವವಿದ್ಯಾಲಯಗಳಲ್ಲಿ ಧರ್ಮ, ಜಾತಿ ಹೆಸರಿನಲ್ಲಿ ನಡೆಯುತ್ತಿರುವ ಕಿರುಕುಳ, ದೌರ್ಜನ್ಯ ಗಳನ್ನು ತಡೆಗಟ್ಟಲು ವಿಶ್ವವಿದ್ಯಾಲಯಗಳ ಧನ ಸಹಾಯ ಆಯೋಗ (ಯುಜಿಸಿ) ತಂದಿರುವ ನಿಯಮ ಗಳನ್ನು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಸ್ವಾಗತಿಸುತ್ತದೆ ಎಂದು ಸಮಿತಿ ರಾಜ್ಯ ಸಂಚಾಲಕ ಡಿ.ಜಿ.ಸಾಗರ ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್.ಸಿ ಮತ್ತು ಎಸ್.ಟಿ. ವಿದ್ಯಾರ್ಥಿಗಳಿಗೆ ಮಾತ್ರ ಪ್ರತ್ಯೇಕ ನಿಯಮ ರೂಪಿಸಬೇಕು ಎಂದು ಒತ್ತಾಯಿಸಿದರು.

ಯುಜಿಸಿ ತಂದಿರುವ ನಿಯಮಗಳಿಗೆ ಸುಪ್ರೀಂ ಕೋರ್ಟ್ ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಲು ಕೇಂದ್ರಸರ್ಕಾರ ಕೂಡಲೇ ಮುಂದಾಗಬೇಕು ಮತ್ತು ಯುಜಿಸಿ ತಂದಿರುವ ನಿಯಮ ಎಸ್.ಸಿ/ಎಸ್.ಟಿ. ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಹೊರಡಿಸಬೇಕು ಎಂದು ಆಗ್ರಹಿಸಿ ಫೆ.9 ರಂದು ಬೆಳಿಗ್ಗೆ 11.30ಕ್ಕೆ ರಾಜ್ಯಾ ದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನಾ ಮೆರವಣಿಗೆ, ಧರಣಿ ನಡೆಸಿ ಪ್ರಧಾನ ಮಂತ್ರಿ ಹಾಗೂ ಕೇಂದ್ರ ಮಾನವ ಸಂಪನ್ಮೂಲ ಹಾಗೂ ಕೌಶಲ್ಯ ಅಭಿವೃದ್ಧಿ ಸಚಿವರಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಪತ್ರ ಸಲ್ಲಿಸಲಾಗುವುದು ಎಂದರು.

ವಿದ್ಯಾರ್ಥಿಗಳು ಹಾಗೂ ಪ್ರಗತಿಪರ ಚಿಂತಕರು ಈ ಪ್ರತಿಭಟನೆಯಲ್ಲಿ ಭಾಗವಹಿಸಬೇಕು ಎಂದರು.

2007 ರಿಂದ 2011ರ ವರೆಗೆ 20 ದಲಿತ ವಿದ್ಯಾರ್ಥಿಗಳು ಜಾತಿ ದೌರ್ಜನ್ಯದ ಕಾರಣಕ್ಕಾಗಿಯೇ ಆತ್ಮಹತ್ಯೆ (ಸಾಂಸ್ಥಿಕ ಹತ್ಯೆ) ಮಾಡಿಕೊಂಡಿದ್ದಾರೆ. 2024 ರಲ್ಲಿ ಕೇಂದ್ರ ಸರ್ಕಾರವೇ ಸುಪ್ರೀಂ ಕೋರ್ಟ್ಗೆ ಸಲ್ಲಿಸಿರುವ ಅಂಕಿ–ಅಂಶಗಳ ಪ್ರಕಾರ ಐಐಟಿ, ಐಐಎಂ, ಎನ್‌ಐಟಿ ಶಿಕ್ಷಣ ಸಂಸ್ಥೆಗಳಲ್ಲಿ 122 ವಿದ್ಯಾರ್ಥಿಗಳು ಆತ್ಮಹತ್ಯೆ ಮಾ ಡಿಕೊಂಡಿದ್ದಾರೆ ಎಂದು ತಿಳಿಸಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ರಾಜ್ಯ ಖಜಾಂಚಿ ಬಿ.ಸಿ.ವಾಲಿ, ಜಿಲ್ಲಾ ಮುಖಂಡರಾದ ಸುರೇಶ ಹಾದಿಮನಿ, ಹೆಚ್.ಶಂಕರ, ಉಮೇಶ ನರೋಣಾ, ಎಸ್.ಪಿ. ಸುಳ್ಳದ್ ಇತರರಿದ್ದರು.

## ರಾಜ್ಯಾಧ್ಯಕ್ಷರಾಗಿ ಸೋಮಶೇಖರ್ ಗೌಡಪ್ಪನೌರ್ ನೇಮಕ

ನವದೆಹಲಿ ಫೆ 2 : ಅಖಿಲ ಭಾರತ ಕಾರ್ಮಿಕ MNREGA ಮಾನಿಟರಿಂಗ್ ಸಮಿತಿಯು ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷರಾಗಿ ಶ್ರೀ ಸೋಮಶೇಖರ್ ಗೌಡಪ್ಪನೌರ್ ಅವರನ್ನು ನೇಮಕ ಮಾಡಲಾಗಿದೆ. ಈ ನೇಮಕಾತಿ ಸಮಾರಂಭವು ನವದೆಹಲಿ ರಫಿ ಮಾರ್ಗದಲ್ಲಿರುವ ಸಂವಿಧಾನ ಕ್ಲಬ್ ಆಫ್ ಇಂಡಿ ಯಾದಲ್ಲಿ ನಡೆಯಿತು.




ಸಮಾರಂಭದಲ್ಲಿ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಪ್ರಮೋದ್ ತ್ಯಾಗಿ ಅವರು ಶ್ರೀ ಸೋಮಶೇಖರ್ ಗೌಡಪ್ಪನೌರ್ ಅವರಿಗೆ ನೇಮಕಾತಿ ಪತ್ರವನ್ನು ಅಧಿಕೃತವಾಗಿ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ತ್ಯಾಗಿ ಅವರು, ಶ್ರೀ ಸೋಮಶೇಖರ್ ಅವರ ನಿರಂತರ ಪ್ರಯತ್ನಗಳು ಹಾಗೂ ಸಕ್ರಿಯ ಕೊಡುಗೆಗಳು ಸಂಸ್ಥೆಯ ಸಾಮಾ ಜಿಕ ಸೇವಾ ಕಾರ್ಯಗಳಿಗೆ ಬಲ ನೀಡಲಿದ್ದು, MNREGA ಕಾರ್ಮಿಕರ ಹಕ್ಕುಗಳು ಮತ್ತು ಕಲ್ಯಾಣಕ್ಕಾಗಿ ಸಮರ್ಪಿತವಾಗಿ ಕಾರ್ಯನಿರ್ವಹಿಸುವ ವಿಶ್ವಾಸವಿದೆ ಎಂದು ತಿಳಿಸಿದರು.

ಅಖಿಲ ಭಾರತ ಕಾರ್ಮಿಕ ಒಓಖಇಉಂ ಮಾನಿಟರಿಂಗ್ ಸಮಿತಿಯು ರಾಷ್ಟ್ರಮಟ್ಟ ಹಾಗೂ ರಾಜ್ಯಮಟ್ಟದಲ್ಲಿ ಒಓಖಇಉಂ ಕಾರ್ಮಿಕರ ಹಿತಾಸಕ್ತಿಗಳು ಮತ್ತು ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸಂಸ್ಥೆಯಾಗಿದೆ. ಕರ್ನಾಟಕ ರಾಜ್ಯಾಧ್ಯಕ್ಷರಾಗಿ ನೇಮಕವಾದ ಬಳಿಕ, ಶ್ರೀ ಸೋಮಶೇಖರ್ ಅವರು ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ, ರಾಷ್ಟ್ರೀಯ ಸಮಿತಿಯ ಮಾರ್ಗದರ್ಶನದಲ್ಲಿ ದೃಢವಾದ ಸಂಘಟನಾ ರಚನೆಯನ್ನು ನಿರ್ಮಿಸುವರು ಎಂಬ ಆಶಾಭಾವನೆಯನ್ನು ಸಮಿತಿಯು ವ್ಯಕ್ತಪಡಿಸಿದೆ.

ತಮ್ಮ ಜವಾಬ್ದಾರಿಯನ್ನು (7ನೇ ಪುಟಕ್ಕೆ)

## MNREGA ಕಾಯ್ದೆ ಹಕ್ಕು ಸ್ವರೂಪ ಬದಲಾವಣೆ ಖಂಡಿಸಿ ಸಿಪಿಎಂನಿಂದ ಪ್ರತಿಭಟನೆ

ರಾಯಚೂರು.ಫೆ.02:ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ MNREGA ಕಾಯ್ದೆ ಹಾಗೂ ಹಕ್ಕು ಸ್ವರೂಪವನ್ನು ತೆಗೆದುಹಾಕಿ ಕೇವಲ ಸರ್ಕಾರದ ಅಣತಿಯ



ಯೋಜನೆಯಾಗಿ ಬದಲಾಯಿಸಿರುವುದನ್ನು ಖಂಡಿಸಿ, ಹಾಗೂ ಅದನ್ನು ಹಿಂಪಡೆಯಲು ಒತ್ತಾಯಿಸಿ ಸಿ.ಪಿ.ಎಂ. ನಿಂದ ಮಾನ್ಯ ಜಿಲ್ಲಾಧಿಕಾರಿಗಳು ರಾಯಚೂರು ಇವರ ಮುಖಾಂತರ ಮಾನ್ಯ ಪ್ರಧಾನ ಮಂತ್ರಿಗಳು, ಭಾರತ ಸರ್ಕಾರ, ನವದೆಹಲಿ. ಇವರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

2004–2005ರಲ್ಲಿ ಎಡಪಕ್ಷಗಳ ಬೆಂಬಲದ ಮೇಲೆ ಆಧಾರವಾಗಿದ್ದ ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರ ಉದ್ಯೋಗ ಖಾತ್ರಿ ಕಾಯ್ದೆ ಜಾರಿಗೊಳಿಸಿತ್ತು. ಈ ಕಾಯ್ದೆಯನ್ನು ಗ್ರಾಮೀಣ ಭಾಗದ ಕೃಷಿ ಕೂಲಿಕಾರರು, ಬಡ ರೈತರು ಹಾಗೂ ಇನ್ನಿತರ ಗ್ರಾಮೀಣ ದುಡಿಮೆಗಾರರಲ್ಲಿ ಶೇ.30 ರಷ್ಟು ಜನರು ತಮ್ಮ ಜೀವನೋಪಯಕ್ಕಾಗಿ ಅವಲಂಬಿದ್ದರು. ಆದರೆ ಈಗ 2025 ರಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ MNREGA ಕಾಯ್ದೆ ಹಾಗೂ ಹಕ್ಕು (7ನೇ ಪುಟಕ್ಕೆ)

## ಇಂದಿನಿಂದ ಬೋಳೆವಾಡ ದರ್ಗಾದ ಉರುಸ್

ಕಲಬುರಗಿ.ಫೆ. 02: ಬೋಳೆವಾಡ ಗ್ರಾಮದ ಹಜರತ್ ಸೈಯದ್ ಬುರಾನೊದ್ದೀನ್ ಜುನ್ನೈದಿ ದರ್ಗಾ ದ ಉರುಸ್ ಫೆಬ್ರವರಿ 03 ರಿಂದ ಆರಂಭವಾ ಗಲಿದೆ ಫೆಬ್ರವರಿ 03 ರಂದು ರಾತ್ರಿ 9–00 ಗಂಟೆಗೆ ಸಂದಲ್, 04 ರಂದು ಚಿರಗಾ, ಹಾಗೂ 05 ರಂದು ಜಿಯಾರತ ಕಾರ್ಯಕ್ರಮ ಜರುಗಲಿವೆ.

ಎಂದು ನಸರೊದ್ದೀನ್ ಕುಡಚಿ, ಖಾಜಾ



ಹುಸೇನ್ ಮೌಜನ, ತಿಪ್ಪಣ ಹತ್ತಿ, ಲಾಲಾಮದ ನಾಗೂರೆ, ಶರಣಯ್ಯ ಗುತ್ತೇದಾರ್, ನರಸಪ್ಪ ನೈಕೊಡಿ, ಮತ್ತು ಬಸವ ರಾಜ ನೈಕೊಡಿ , ಅವರು ತಿಳಿಸಿ ದ್ದಾರೆ.

ಕಲಬುರ್ಗಿ ಸೂಪರ್ ಮಾರ್ಕೆಟ್ ನಿಂದ ಬಸ್ ಹಾಗೂ ಸಣ್ಣೂರ ಕ್ರಾಸ್ ನಿಂದ ಖಾಸಗಿ ವಾಹನಗಳ ವ್ಯವಸ್ಥೆ ಇರುತ್ತದೆ.

## ಕೃಷಿಯಾಧಾರಿತ ರಾಜ್ಯಕ್ಕಿಲ್ಲ ಒತ್ತು



ಬೆಂಗಳೂರು: ಫೆ.2: ಶೇ.60ರಷ್ಟು ರಾಜ್ಯವು ಕೃಷಿ ಆಧಾರಿತ ರಾಜ್ಯವಾಗಿದ್ದು, ಕೃಷಿಗೆ ಸಂಬಂಧಿಸಿದಂತೆ ಕೇಂದ್ರ ಬಜೆಟ್‌ನಲ್ಲಿ ಯಾ ವುದೇ ಒತ್ತು ನೀಡಿಲ್ಲ.

ರಾಜ್ಯಕ್ಕೆ ಇದೊಂದು ನಿರಾಶದಾಯಕ ಬಜೆಟ್ ಆಗಿದೆ. ರಾಜ್ಯದ 19 ಸಂಸದರಿದ್ದು, ಮೂವರು ಮಂತ್ರಿಗಳಿದ್ದಾರೆ. ಬಿಜೆಪಿ ಸಂಸದರು, ಮಂತ್ರಿಗಳು ಒತ್ತಡ ಹಾಕಿ ರಾಜ್ಯಕ್ಕೆ ಯೋಜನೆ ತರಲು ಮುಂದಾಗಬೇಕಿತ್ತು. ಅದರಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ.

ರೈತ, ಜನರ ವಿರೋಧಿ ಬಜೆಟ್ ಆಗಿದೆ. ಕೇಂದ್ರದ ಬಿಜೆಪಿ ಸರ್ಕಾರ ಬಜೆಟ್ ಮಂಡಿಸಿ ತನ್ನದೇ ಬೆನ್ನು ತಟ್ಟಿಕೊ ಳ್ಳುತ್ತಿದೆ. ಇದರಲ್ಲಿ ಜನರಿಗೆ ಅನುಕೂಲವಾಗುವಂಥ ಯಾವುದೇ ಯೋಜನೆಗಳಿಲ್ಲ.

## ದೇಶದ ಅಭಿವೃದ್ಧಿಗೆ ಪೂರಕ ಬಜೆಟ್:ಮೀನಳ್ಳಿ

ಬಳ್ಳಾರಿ ಫೆ 02. ದೇಶದ ಅಭಿವೃದ್ಧಿಗೆ ಪೂರಕವಾಗಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾ ರಾಮನ್ ಅವರು ಅತ್ಯುತ್ತಮ ಬಜೆಟ್ ನ್ನೂ ಮಂಡಿಸಿ ಇತಿಹಾಸ ಸೃಷ್ಟಿಸಿದ್ದಾರೆ, ಸಚಿವೆ ನಿರ್ಮಲಾ ಸೀತಾ ರಾಮನ್



ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸುವೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ತಿಳಿಸಿದ್ದಾರೆ. (7ನೇ ಪುಟಕ್ಕೆ)

### ಸಂಪೂರ್ಣತಾ ಅಭಿಯಾನ 2.0ಗೆ ಚಾಲನೆ:

## ನೀತಿ ಆಯೋಗ ಗುರುತಿಸಿರುವ ತಾಲೂಕಿನಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿ: ಬಿ. ಫೌಜಿಯಾ

ಕಲಬುರಗಿ,ಫೆ.2: ನೀತಿ ಆಯೋಗ ಗುರುತಿಸಿರುವ ಜಿಲ್ಲೆಯ ಆಫಜಲಪೂರ, ಕಾಳಗಿ, ಶಹನಾದ ತಾಲೂಕಿನಲ್ಲಿ ಸಂಪೂರ್ಣತಾ ಅಭಿಯಾನ 2.0 ರ ಮೂಲಕ ಆರೋಗ್ಯ, ಅಪೌಷ್ಟಿಕತೆ ನಿವಾರಣೆ, ಶಿಕ್ಷಣ ಹಾಗೂ ಕೃಷಿ ಕ್ಷೇತ್ರಗಳಲ್ಲಿ ಶೇ.100



ರಷ್ಟು ಪ್ರಗತಿ ಸಾಧಿಸುವುದು ನಮ್ಮ ಗುರಿಯಾಗಿದ್ದು, ಅದನ್ನು ಪರಿಣಾ ಮಕಾರಿಯಾಗಿ ಅನುಷ್ಠಾನ ಮಾಡಬೇಕು ಎಂದು ಅಧಿಕಾರಿಗಳಿಗೆ ಡಿ.ಸಿ. ಬಿ. ಫೌಜಿಯಾ ತರನ್ನುಮ್ ಸೂಚಿಸಿದರು.

ಸೋಮವಾರ ಇಲ್ಲಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದನೀತಿ ಆಯೋಗದ ಮಹತ್ವಾ ಕಾಂಕ್ಷಿ ಕಾರ್ಯಕ್ರಮ "ಸಂಪೂರ್ಣತಾ ಅಭಿಯಾನ 2.0"ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೂರು ಆಕಾಂಕ್ಷಿ ಬ್ಲಾಕ್‌ಗಳಲ್ಲಿ ಕಾರ್ಯ ಕ್ರಮಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಇಲಾಖೆಗಳ ನಡುವಿನ ಸಮನ್ವಯ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಇನ್ನು ಕ್ಷೇತ್ರ ಮಟ್ಟದ ನಿರಂತರ ಮೇಲ್ವಿಚಾರಣೆ ಅತ್ಯವಶ್ಯಕವಾಗಿದೆ. ಪ್ರಮುಖವಾಗಿ ಜನರ ಸಹಭಾಗಿತ್ವ ಅತ್ಯಂತ ಅಗತ್ಯವೆಂದು ಒತ್ತಿ ಹೇಳಿದ ಅವರು, ಯಾವುದೇ ಅರ್ಹ ಫಲಾನುಭವಿಯೂ ಸರ್ಕಾರಿ ಯೋಜನೆ ಮತ್ತು ಸೌಲಭ್ಯಗಳಿಂದಹೊರಗುಳಿಯದಂತೆ ಎಚ್ಚರ ವಹಿಸಬೇಕೆಂದರು.

ಕಾಳಗಿಯೆ ನಮಗೆ ಪ್ರೇರಣೆ:

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವಾರ್ ಸಿಂಗ್ ಮಾತನಾಡಿ, ನೀತಿ ಆಯೋಗದ ಸಂಪೂರ್ಣತಾ (7ನೇ ಪುಟಕ್ಕೆ)

## ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ, ಮಾರಾಟ ಮೇಳಕ್ಕೆ ಚಾಲನೆ

ಬಳ್ಳಾರಿ,ಫೆ.02: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀ ಕೋಟೆ ಮಲ್ಲೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ದೇವಸ್ಥಾನ ಆವರಣದಲ್ಲಿ ಆಯೋಜಿಸಲಾಗಿದ್ದ ಮೂರು ದಿನಗಳ (ಫೆ.01 ರಿಂದ 03 ರವರೆಗೆ) ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಭಾನುವಾರ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು, ಅವರಿಗೆ ಬೆಂಬಲ ಮತ್ತು ಪ್ರೋತ್ಸಾಹ ನೀಡಲಾಗುತ್ತಿದೆ. ಸಾರ್ವಜನಿಕರು ಭೇಟಿ ನೀಡಿಇದರ ಸದುಪಯೋಗಪಡೆದುಕೊಳ್ಳಬೇಕು ಎಂದರು. (7ನೇ ಪುಟಕ್ಕೆ)

## ಮೂವರು ಉರ್ದು ಲೇಖಕರಿಗೆ ಮಹಬೂಬ್ ಅಲಿ ಖಾನ್ ಪ್ರಶಸ್ತಿ ಪ್ರದಾನ



ಕಲಬುರಗಿ: ಫೆ. 2:ಮುಜೀಬ್ ಅಲಿ ಖಾನ್ ಮ್ಯೂಸಿಯಂ ಕಲ್ಚರಲ್ ಫೋರಂ, ಗುಲ್ಬರ್ಗಾ ವತಿಯಿಂದ ಆಯೋಜಿಸಲಾದ ಸಮಾರಂಭದಲ್ಲಿ, ಉರ್ದೂ ಭಾಷೆ ಹಾಗೂ ಸಾಹಿತ್ಯಕ್ಕೆ ಗಣನೀಯ ಕೊಡುಗೆ ನೀಡಿದ ಗುಲ್ಬರ್ಗಾದ ಮೂವರು ಖ್ಯಾತ ಲೇಖಕರಿಗೆ ಮಹಬೂಬ್ ಅಲಿ ಖಾನ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈ ಕಾರ್ಯಕ್ರಮವು ದಿನಪತ್ರಿಕೆ ಇನ್ಕಿಲಾಬ್ ಡೆಕ್ಕನ್‌ನ ಮುಖ್ಯ ಸಂಪಾ ದಕರಾದ ಹಾಜಿ ಮೊಹಮ್ಮದ್ ಮುಹಿ ಯುದ್ದೀನ್ ಪಾಶಾ ಅವರ ಆಶ್ರಯದಲ್ಲಿ ಹಾಗೂ ಹಿರಿಯ ಪತ್ರಕರ್ತ ಮತ್ತು ಖ್ಯಾತ ಕವಿ ಹಾಜಿ ಹಕೀಮ್ ಶಾಕರ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಕಾಜಿ ಮಹಬೂಬ್ ಅಲಿ ಖಾನ್ (ಮರಹೂಮ್) ಅವರ ಜನ್ಮ ಶತಮಾ ನೋತ್ಸವದ ಅಂಗವಾಗಿ, ಅವರ ಹೆಸರಿನಲ್ಲಿ ನೀಡಲಾದ ಈ ಪ್ರಶಸ್ತಿಗಳನ್ನು ರಾಷ್ಟ್ರಮಟ್ಟದಲ್ಲಿ ಖ್ಯಾತಿ ಪಡೆದ ಲೇಖಕರಾದ ಮಂಜೂರ್ ವಕಾರ್ (ಸಮಗ್ರ ಸೇವೆಗಳಿಗೆ), ಡಾ. ಅನೀಸ್ ಸಿದ್ದೀಕಿ (ಸಾಹಿತ್ಯ ಸೇವೆಗಳಿಗೆ) ಮತ್ತು ಡಾ. ಘಜನ್‌ಫರ್ ಇಕ್ಬಾಲ್‌ಸುಹ್ರವರ್ದಿ (ಗದ್ಯ ಸೇವೆಗಳಿಗೆ) ಅವರಿಗೆ ಪ್ರದಾನ ಮಾಡಲಾಯಿತು.

ಪ್ರಶಸ್ತಿಗಳನ್ನು ಹಿರಿಯ ಕಾಂಗ್ರೆಸ್ ನಾಯಕ ಆಲಂ ಖಾನ್ ಅವರುವಿತರಿಸಿದರು.

ಕಾರ್ಯಕ್ರಮದ ಆರಂಭ ಪವಿತ್ರ ಕುರಾನ್ ಪಠಣದಿಂದ ನಡೆಯಿತು. ಬಳಿಕಹಮ್ದ್ ಹಾಗೂ ನಾತ್‌ಗಳನ್ನು (7ನೇ ಪುಟಕ್ಕೆ)

## ಇಂದು ಮಾನಸಿಕ ಆರೋಗ್ಯ ಶಿಬಿರ

ಕಲಬುರಗಿ,ಫೆ.02.–ಮನೋಚೈತನ್ಯ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೆಳಕಂಡ ದಿನಾಂಕಗಳಂದು ಮಾನಸಿಕ ಆರೋಗ್ಯ ಶಿಬಿರವನ್ನು (7ನೇ ಪುಟಕ್ಕೆ)

## ಚುನಾವಣಾ ಪ್ರೇರಿತ ನಿರಾಶದಾಯಕ ಬಜೆಟ್

ಕಲಬುರಗಿ: ಚುನಾವಣೆ ನಡೆಯಲಿರುವ ಪಂಚ ರಾಜ್ಯಗಳಿಗೆ ಬಜೆಟ್‌ನಲ್ಲಿ ಬಂಪರ್ ಕೊಡುಗೆ, ಆದಾಯ



ತೆರಿಗೆಯಲ್ಲಿ ಬದಲಾವಣೆ ಇಲ್ಲ ಆದಾಯ ತೆರಿಗೆ ಪಾವತಿದಾರರಿಗೆ ನಿರಾಶೆಯಾ ಗಿದೆ, ಬಾರೀ ನಿರೀಕ್ಷೆಯಲ್ಲಿದ್ದ ಕರ್ನಾಟಕಕ್ಕೆ ಹಾಗೂ ಚಿತ್ರ ದುರ್ಗ ಜಿಲ್ಲೆಗೆ ಬಾರೀ ನಿರಾಶೆ ಯಾಗಿದೆ ಎಂದು ಆರ್ಥಿಕಚಿಂತಕರಾದ ಎಸ್.ಲಕ್ಷ್ಮಣ ಅವರು ವಿಶ್ಲೇಷಿಸಿದ್ದಾರೆ.

# ಕರ್ನಾಟಕ ರಾಜ್ಯ ಮುಕ್ತ ವಿವಿಯ ವಿವಿಧ ಕೋರ್ಸುಗಳ ಪ್ರವೇಶಾತಿ ಆರಂಭ

ಕಲಬುರಗಿ:ಫೆ.2"– ಪ್ರಸಕ್ತ2025–26ನೇ ಶೈಕ್ಷಣಿಕ ಸಾಲಿಗೆ ಮೈಸೂರಿ ನಕರ್ನಾ ಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಜನೇವರಿ ಆವೃತ್ತಿಗೆ ವಿವಿಧ ಪದವಿ,ಸ್ನಾತ ಕೋತ್ತರ ಪದವಿ, ಡಿಪ್ಲೊಮಕೋರ್ಸ್ ಗಳು ಮತ್ತು ವಿವಿಧ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈಗಾಗಲೇ ಪ್ರವೇಶ ಪ್ರಕ್ರಿಯೆ ಆರಂಭವಾಗಿದ್ದು, ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಕೊನೆ ದಿನಾಂಕ ಮುಂದಿನ ತಿಂಗಳು ಮಾರ್ಚ 30 ಆಗಿರುತ್ತದೆ.

ರಾಜ್ಯದಲ್ಲಿ ದೂರ ಶಿಕ್ಷಣ ನೀಡುವ ಏಕ ಮಾತ್ರ ವಿಶ್ವವಿದ್ಯಾನಿಲಯವಾಗಿದ್ದು, ಕೆಎಸ್‌ಒಯು ವಿಶ್ವವಿದ್ಯಾಲಯ ಧನಸ ಹಾಯ ಆಯೋಗದ (ಗಲುಅ)ಮಾನ್ಯತೆ ಪಡೆದಿದೆ. ಯುಜಿಸಿ ನಿಯಮಾವಳಿ ಪ್ರಕಾರ ಪೂರ್ಣಾವಧಿಯಲ್ಲಿ ಭೌತಿಕ, ಒಂದು ಕೋರ್ಸ್ ಮತ್ತು ದೂರ ಶಿಕ್ಷಣದಲ್ಲಿ ಇನ್ನೊಂದು ಕೋರ್ಸ್‌ಗಳನ್ನು ಏಕಕಾಲದಲ್ಲೇ (ಒಂದೇ ವರ್ಷದಲ್ಲಿ) ಅಧ್ಯಯನ ಮಾಡಲು ಅವಕಾಶ ಇರುತ್ತದೆ.

ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ವಿವಿಯ ಅಧಿಕೃತ ಅಡ್ಮಿಷನ್ ಪೋರ್ಟಲ್ http://ksouportal.com/views/StudentHome.aspx CxÀªÁ www.ksoumysuru. ಚಿಛಿ.ಟಿ ಗೆ ಭೇಟಿ ನೀಡುವ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಆಯಾ ಕೋರ್ಸ್‌ಗಳಿಗೆ ನಿಗದಿಪಡಿಸಿರುವ ಶೈಕ್ಷಣಿಕ ಅರ್ಹತೆಯನುಸಾರ ದಾಖಲಾತಿ ಗಳೊಂದಿಗೆ ವಿವಿ ನಿಲಯದ ಕೇಂದ್ರ ಕಚೇರಿ ಮೈಸೂರು, ವಿವಿಧ ಪ್ರಾದೇಶಿಕ ಕೇಂದ್ರಗಳು ಮತ್ತು ಕಲಿಕಾರ್ಥಿ ಸಹಾಯ ಕೇಂದ್ರಗಳಲ್ಲಿ ಸಲ್ಲಿಸಿ ಪ್ರವೇಶಾತಿ ಪಡೆಯಬಹುದಾಗಿದೆ. ಪ್ರವೇಶಾತಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಪದವಿ ಕೋರ್ಸ್‌ಗಳಾದ, ಬಿ.ಎ, ಬಿ.ಕಾಂ, ಬಿ.ಲಿಬ್.ಐ.ಎಸ್.ಸಿ, ಬಿಎಸ್ಸಿ ಸಾಮಾನ್ಯ, ಬಿಎಸ್ಸಿ ಹೋಮ್ ಸೈನ್ಸ್, ಬಿಎಸ್ಸಿ ಇನ್‌ಫರ್‌ಮೇಷನ್ ಸೈನ್ಸ್, ಬಿಸಿಎ, ಬಿಬಿಎ– ಮಾರ್ಕೆಟಿಂಗ್, ಹಾಗು ಪಿಜಿ ಕೋರ್ಸ್‌ಗಳಾದ ಎಂ.ಎ –ಕನ್ನಡ, ಇಂಗ್ಲಿಷ್, ಹಿಂದಿ, ಸಂಸ್ಕೃತ, ಉರ್ದು, ತೆಲುಗು, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಸಾರ್ವಜನಿಕ ಆಡಳಿತ, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಶಿಕ್ಷಣ. ಎಂ.ಕಾಂ., ಎಂಬಿಎ, ಎಂಲಿಬ್‌ಐಎಸ್ಸಿ

ಎಂಎಸ್ಸಿ ಕೋರ್ಸ್‌ಗಳು –ಜೀವ ರಸಾಯನಶಾಸ್ತ್ರ, ಜೈವಿಕ ತಂತ್ರಜ್ಞಾನ, ರಸಾಯನಶಾಸ್ತ್ರ, ಕ್ಲಿನಿಕಲ್ ನ್ಯೂಟ್ರಿಷನ್ ಅಂಡ್ ಡಯಟೆಟಿಕ್ಸ್, ಪರಿಸರ ವಿಜ್ಞಾನ, ಕಂಪ್ಯೂಟರ್ ವಿಜ್ಞಾನ, ಭೂಗೋಳ ಶಾಸ್ತ್ರ, ಮಾಹಿತಿ ವಿಜ್ಞಾನ, ಗಣಿತಶಾಸ್ತ್ರ, ಸೂಕ್ಷ್ಮ ಜೀವಶಾಸ್ತ್ರ, ಭೌತಶಾಸ್ತ್ರ, ಮನೋವಿಜ್ಞಾನ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಫುಡ್ ಅಂಡ್ ನ್ಯೂಟ್ರಿಷನ್ ಸೈನ್ಸ್ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೊಮಾ ಕೋರ್ಸ್‌ಗಳುಪಿ.ಜಿ ಡಿಪ್ಲೊಮಾ ಕೋರ್ಸ್‌ಗಳು : ಕಮ್ಯೂನಿಕೇಟಿವ್ ಇಂಗ್ಲಿಷ್, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಇಂಗ್ಲಿಷ್, ಕುವೆಂಪು ಸಾಹಿತ್ಯ, ವ್ಯವಹಾರಿಕ ಕಾನೂನು, ವ್ಯವಹಾರಿಕ ನಿರ್ವಹಣೆ, ಮಾನವ ಸಂಪನ್ಮೂಲ ನಿರ್ವಹಣೆ, ಹಣಕಾಸು ನಿರ್ವಹಣೆ, ಅಂಬೇಡ್ಕರ್ ಅಧ್ಯಯನ, ಮಾರುಕಟ್ಟೆ ನಿರ್ವಹಣೆ, ಅಂಬೇಡ್ಕರ್ ಅಧ್ಯಯನ, ಮಾರುಕಟ್ಟೆ ನಿರ್ವಹಣಾಶಾಸ್ತ್ರ, ನ್ಯೂಟ್ರಿಷನ್ ಅಂಡ್ ಡಯಟೆಟಿಕ್ಸ್ , ಮಾಹಿತಿ ತಂತ್ರಜ್ಞಾನ, ಕಂಪ್ಯೂಟರ್ ಅಪ್ಲಿಕೇಶನ್. ಡಿಪ್ಲೊಮಾ ಕೋರ್ಸ್‌ಗಳು (10+2 ಆಧಾರಿತ) –ಡಿಪ್ಲೊಮಾ –ಕನ್ನಡ, ಪತ್ರಿಕೋದ್ಯಮ, ನ್ಯೂಟ್ರಿಷನ್ ಅಂಡ್ ಹೆಲ್ತ್ ಎಜುಕೇಷನ್, ಮಾಹಿತಿ ತಂತ್ರಜ್ಞಾನ, ಕಂಪ್ಯೂಟರ್ ಅಪ್ಲಿಕೇಷನ್. ಅರ್ಲಿ ಚೈಲ್ಡ್‌ಹುಡ್ ಕೇರ್ ಅಂಡ್ ಎಜುಕೇಷನ್.

ಯುಜಿ ಸರ್ಟಿಫಿಕೇಟ್ ಕೋರ್ಸ್‌ಗಳು (10+2 ಆಧಾರಿತ)– ಪಂಚಾಯತ್ ರಾಜ್, ಮಾಹಿತಿ ಸಂವಹನ ತಂತ್ರಜ್ಞಾನ, ನ್ಯೂಟ್ರಿಷನ್ ಅಂಡ್ ಫುಡ್, ಇಂಗ್ಲಿಷ್, ಎಂಪ್ಲಾಯ್‌ಮೆಂಟ್ ಮತ್ತು ಎಮಟರ್‌ಪ್ರೆನ್ಯುರ್‌ಷಿಪ್ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಬಹುದಾಗಿದೆ

ಯಾವುದೇ ಈ ಕೋರ್ಸ್‌ಗಳ ಪ್ರವೇಶಾತಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ನಂತರ ಕಡ್ಡಾಯವಾಗಿ ನಿಮ್ಮ ಹತ್ತಿರದ ಫಿಣಾ ಪ್ರಾದೇಶಿಕ ಕೇಂದ್ರಕ್ಕೆ ಅಥವಾ ಏಖಔಗ ಕೇಂದ್ರ ಕಚೇರಿ ಮೈಸೂರಿಗೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ ನಂತರ ಡೇಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಪ್ರವೇಶಾತಿ ಶುಲ್ಕ ಪಾವತಿಸಿ, ಪ್ರವೇಶಾತಿ ಪಡೆದುಕೊಳ್ಳಬಹುದು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕರಾಮುವಿ ಆನ್‌ಲೈನ್ ಪೋರ್ಟಲ್ ಡೈರೆಕ್ಟ್ ಲಿಂಕ್ http://ksouportal.com/views/StudentHome.aspx ಅಥವಾ www.ksoumysuru.ac.in ಗೆ ಭೇಟಿ ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೆಎಸ್‌ಓಯು ಕಲಬುರಗಿ ಪ್ರಾದೇಶಿಕ ಕೇಂದ್ರವನ್ನು ಹಾಗೂ ಕೇಂದ್ರದ ನಿರ್ದೇಶಕರಾದ ಹಣಮಂತ ಆರ್. ಕಾಳನೂರ ಅವರ ಮೊಬೈಲ್ ನಂ 9880061361 ಗೆ ಸಂಪರ್ಕಿಸಬಹುದಾಗಿದೆ.

# ಎಪಿಎಂಸಿ ಆವರಣದಲ್ಲಿ ರೈತ ನಾಯಕ ಪ್ರೊ|| ಎಂ ಡಿ ನಂಜುಂಡಸ್ವಾಮಿರವರೆ ಮೂರ್ತಿ ಸ್ಥಾಪನೆಗೆ ಮನವಿ



ಕಲಬುರಗಿ ಎಪಿಎಂಸಿ ಆವರಣದಲ್ಲಿ ರೈತ ನಾಯಕ ಪ್ರೊ|| ಎಂ ಡಿ ನಂಜುಂಡಸ್ವಾಮಿರವರೆ ಮೂರ್ತಿ ಸ್ಥಾಪನೆ ಮಾಡಲು 20–30 ನಿವೇಶನ ಒದಗಿಸಬೇಕೆಂದು ಕರ್ನಾಟಕ ರೈತ ಸಂಘ ಹಾಗೂ ಹಸಿರುಸೇನೆ ವತಿಯಿಂದ ಕೃಷಿ ಉತ್ಪನ ಮಾರುಕಟ್ಟೆ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ರೈತ ನಾಯಕ ರಾಜ್ಯ ಕಂಡ ಅಪುರೂಪದ ಜನನಾಯಕರು ರೈತ ಸಂಘದ ಸಂಸ್ಥಾಪಕರಾದ ಪ್ರೊ|| ಎಂ ಡಿ ನಂಜುಂಡಸ್ವಾಮಿರವರ ಭವ್ಯ ಮೂರ್ತಿಯನ್ನು ಅತಿ ಶಿಘ್ರದಲ್ಲಿ ಸ್ಥಾಪನೆ ಮಾಡಲಿದ್ದೇವೆ ಆದ್ದರಿಂದ ತಾವು ದಯಮಾಡಿ ತಮ್ಮ ಎಪಿಎಂಸಿ ಆವರಣದಲ್ಲಿ ಖಾಲಿ ಇರುವ ಸೂಕ್ತವಾದ 20.30 ಅಳತೆಯ ನಿವೇಶನ ಒದಗಿಸಿ ರೈತ ನಾಯಕರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಸಹಕಾರ್ಯದರ್ಶಿ ಡಾ.ಮಲ್ಲಿಕಾರ್ಜುನ ಎಸ್.ಗಂವ್ಹಾರ, ಜಿಲ್ಲಾ ಅಧ್ಯಕ್ಷ ಚಂದ್ರಕಾಂತ ಓಗೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಧಾಕರ ಇಟ್ಟಗಿ, ರೈತ ಮುಖಂಡ ಮಲ್ಲಿಕಾರ್ಜುನ ಜಾಜಿ, ಶರಣಪ್ಪ, ಮಹಿಳಾ ಮುಖಂಡೆ ಕಾವೇರಿ ಸಿಂಧೆ ಇದ್ದರು.

# ಶಿಕ್ಷಣವೇ ಮಹಿಳಾ ಸಬಲೀಕರಣದ ಮೂಲ ಮಂತ್ರ ಸಾವಿತ್ರಿಭಾಯಿ ಫುಲೆ ಎಲ್ಲರಿಗೂ ಆದರ್ಶ : ಅಲ್ಲಮಪ್ರಭು ಪಾಟೀಲ



ಕಲಬುರಗಿ : ಭಾರತದ ಶ್ರೇಣಿಕೃತ ಸಾಮಾಜಿಕ ವ್ಯವಸ್ಥೆಯಲ್ಲಿ ಮಹಿಳೆಯರು ಹಾಗೂ ಅಸ್ಪೃಶ್ಯರು ಶಿಕ್ಷಣದಿಂದನಿರಾಕರಿಸಲ್ಪಟ್ಟ ಕಾಲಘಟ್ಟದಲ್ಲಿ ದೇಶದ ಶಿಕ್ಷಣ ವಂಚಿತ ಮಹಿಳೆಯರಿಗೆ ಅಕ್ಷರ ಕಲಿಸುವ ಮೂಲಕ ಶಿಕ್ಷಣವೇ ಮಹಿಳೆಯರ ಸಬಲೀಕರಣದ ಮೂಲಮಂತ್ರಎಂಬು ದನ್ನು ತೋರಿಸಿಕೊಟ್ಟವರು ಸಾವಿತ್ರಿಭಾಯಿ ಫುಲೆ. ಅವರನ್ನ ನಾವೂ ಎಂದೂ ಮರೆಯುವಂತಿಲ್ಲ. ದೇಶದ ಸಮಸ್ತ ಮಹಿಳಾ ಕುಲ ಶಿಕ್ಷಣ ಮಾತೆ ಸಾವಿತ್ರಿಭಾಯಿ ಫುಲೆ ಅವರನ್ನು ಸ್ಮರಿಸುವಂತಾಗಬೇಕು ಎಂದು ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು. ಪಟ್ಟಣದ ಜೈವೀರ ಹನುಮಾನ್ ದೇವ ಸ್ಥಾನದ ಆವರಣದಲ್ಲಿ ಕಲಬುರಗಿ ಜಿಲ್ಲಾ ಅಖಂಡ ಕರ್ನಾಟಕ ಹೂಗಾರ ಮಹಾಸಭಾ ಬೆಂಗಳೂರು, ಕಲಬುರಗಿ ಜಿಲ್ಲಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಅಕ್ಷರದವ್ವ ಸಾವಿತ್ರಿಭಾಯಿ ಫುಲೆ ಜಯಂತೋತ್ಸವ ಹಾಗೂ ಹೂಗಾರ ಸಮಾಜದ ಮಹಿಳಾ ಶಿಕ್ಷಕಿಯರಿಗೆ ಸಾವಿತ್ರಿಭಾಯಿ ಫುಲೆ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಂತ ಹಣದಲ್ಲಿ 18 ಶಾಲೆಗಳನ್ನು ತೆರೆದು ಶಿಕ್ಷಣ ನೀಡಿದ್ದರಲ್ಲದೇ, ಅನೇಕ ಸಾಮಜಿಕ ಅನಿಷ್ಟ ಪದ್ಧತಿಗಳ ವಿರುದ್ಧವೂ ಹೋರಾಡಿದ್ದರು. ಇಂತಹ ಮಹಾಮಾತೆಯ ಆದರ್ಶಗಳನ್ನು ಪ್ರತಿಯೊಬ್ಬ ಮಹಿಳೆಯರೂ ಅಳವಡಿಸಿಕೊಳ್ಳಬೇಕುಎಂದರು. ಸಾವಿತ್ರಿಭಾಯಿ ಫುಲೆಯವರ ಜಯಂತಿಯನ್ನ ಆಚರಿಸುವುದರ ಮೂಲಕ , ಅವರ ಸವಿನೆನಪಿನಲ್ಲಿ ಅವರ ಹೆಸರಿನಲ್ಲಿ ಹೂಗಾರ ಸಮಾಜ ಮಹಿಳಾ ಶಿಕ್ಷಕಿಯರಿಗೆ ಪ್ರಶಸ್ತಿಗಳನ್ನು ನೀಡುತ್ತಿರುವುದು ಸಂತಸದ ವಿಚಾರ ಎಂದರು. ಕಲಬುರಗಿ ಬಿಜೆಪಿ ಮಹಿಳಾ ಮುಖಂಡರಾದ ಶ್ರೀಮತಿ ಜಯಶ್ರೀ ಬಸವರಾಜ್ ಮತ್ತೀಮೋಡ್ ಸಾವಿತ್ರಿಭಾಯಿ ಫುಲೆ, ಹಾಗೂ ಹೂಗಾರ ಮಾದಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಪ್ರೊ.ಬಿ.ಪಿ ಹೂಗಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಉಪನ್ಯಾಸಕರಾದ ಸಂತೋಷ ಹೂಗಾರ ತಡಕಲ್ ಫುಲೆಯವರ ಜೀವನ ಸಾಧನೆ ಕುರಿತುಉಪನ್ಯಾಸ ನೀಡಿದರು. ಕೆ.ಕೆ.ಆರ್.ಟಿಸಿ ಅಧ್ಯಕ್ಷರಾದ ಅರುಣ್ ಕುಮಾರ್ ಎಮ್‌ವಾಯ್ ಪಾಟೀಲ್, ಮಾಜಿ ಶಾಸಕ ದೊಡ್ಡಪ್ಪಗೌಡ ಎಸ್. ಪಾಟೀಲ್, ಬಿಜೆಪಿ ಮಹಿಳಾ ಮುಖಂಡಾರದ ಶ್ರೀಮತಿ ದಿವ್ಯಾ ರಾಜೇಶ್ ಹಾಗರಗಿ, ಆರ್.ಕೆ.ಪಾಟೀಲ, ಶರಣಕುಮಾರ ಮೋದಿ, ನೀಲಕಂಠರಾವ ಮೂಲಗೆ ಪತ್ರಕರ್ತ ವಿಶ್ವನಾಥ್ ಹೂಗಾರ್, ಮಾತನಾಡಿದರು.

ಈ ವೇಳೆ ಕಲಬುರಗಿ ಜಿಲ್ಲೆಯಹೂಗಾರ ಸಮಾಜದ ಮಹಿಳಾ ಶಿಕ್ಷಕಿಯರಿಗೆ ಸಾವಿತ್ರಿ ಭಾಯಿ ಫುಲೆ ಪ್ರಶಸ್ರಿ ಪ್ರಧಾನ ಮಾಡಿ ಗೌರವಿಸಲಾಯಿತು.

ಇದೇ ವೇಳೆ ವೇದಿಕೆಯಲ್ಲಿಶ್ರೀಗುರುರಾಜೇಂದ್ರ ಶಿವಯೋಗಿಗಳ ಜೊತೆಗೆಬಸವ ರಾಜ್ ಹೂಗಾರ್ ಯಡ್ರಾಮಿ, ಡಾ.ಶರಣ ಪ್ರಿಯ ಮಹೇಶ್ ಹೂಗಾರ್ ಬಳಭಟ್ಟಿ, ಶ್ರೀಮತಿ ನೀಲಮ್ಮ ಭೀಮಾಶಂಕರ ಹೂಗಾರ, ಭಾಗ್ಯಶ್ರೀ ಹೂಗಾರ ಮುದನೂರ ಇವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.

ಸಮಾಜದ ಗೌರವಾಧ್ಯಕ್ಷರು ಮಹಾ ಲಕ್ಷ್ಮಿ ದೇವಿ ಶ್ರೀ ಶರಣ ಹೂಗಾರ ಮಾದಯ್ಯನವರ ಮಹಾಶಕ್ತಿಪೀಠ ನದಿಸಿ ನ್ನೂರಿನ ಗುರುರಾಜೇಂದ್ರ ಶಿವ ಯೋಗಿಗಳು ಸಾನಿಧ್ಯ ವಹಿಸಿದ್ದರು.

ಕಲಬುರಗಿ ಜಿಲ್ಲಾಧ್ಯಕ್ಷರಾದ ಪ್ರಕಾಶ ಫುಲಾರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ರಾಜ್ಯಾದ್ಯಕ್ಷರಾದ ಬಸವರಾಜ್ ಹೂಗಾರ, ರಾಯಚೂರು, ಶಂಭಣ್ಣ ಹೂಗಾರ, ಎಂ.ಹೆಚ್.ಹೂಗಾರ, ದತ್ತರರಾಜ ಹೂಗಾರ, ಚೆನ್ನಬಸಪ್ಪ ಹೂಗಾರ ಖೈನೂರ, ನರಸಣ್ಣ ಪೂಜಾರಿ, ಬಸವರಾಜ ಹೂಗಾರ ಕೋಟನೂರ, ಶಿವಾನಂದ ಹೂಗಾರ, ಈರಣ್ಣ ಹೂಗಾರ, ಶಾಂತಪ್ಪ ಹೂಗಾರ, ಮಡಿವಾಳ ಹೂಗಾರ, ರೇವಣಸಿದ್ದಪ್ಪ ಹೂಗಾರ ಅಫಜಲಪೂರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನೂತನ ಪದಾಧಿಕಾರಿಗಳ ಆಯ್ಕೆ

ಕಲಬುರಗಿ: ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ. ಬಿ.ಕೃಷ್ಣಪ್ಪ ಸ್ಥಾಪಿತ ದಸಂಸ ಹಿರಿಯ ಮುಖಂಡ ಭೀಮರಾಯ ಗೌರ (ಬಿ) ಅವರ ಅಧ್ಯಕ್ಷತೆಯಲ್ಲಿ ಅಫಜಲಪೂರ ಪಟ್ಟಣದ ಐವಾನ್–ಎ–ಶಾಹಿ ಅತಿಥಿ ಗೃಹದಲ್ಲಿ ಸಭೆ ನಡೆಸಿ ಈ ಸಭೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ. ಬಿ.ಕೃಷ್ಣಪ್ಪ ಸ್ಥಾಪಿತ ಅಫಜಲಪೂರ ತಾಲೂಕಿನ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.

ಅಫಜಲಪೂರ ತಾಲೂಕು ಸಂಚಾಲಕರಾಗಿ ಬಸವರಾಜ ಬಿಲಕರ, ಸಂಘಟನಾ ಸಂಚಲಕರಾಗಿ ಲಕ್ಷ್ಮಣ ನಡಿಗೇರಿ, ಲಕ್ಷ್ಮಣ ಭೀಮಶಾ ತೇಲ್ಕರ್, ಭೀಮರಾಯ ಗೌರ (ಬಿ) ಮಾತನಾಡುತ್ತಾ ದ.ಸಂ.ಸ ಈ ನಾಡಿನಲ್ಲಿ 5 ದಶಕಗಳ ಕಾಲ ನಿರಂತರವಾಗಿ ಶೋಷಿತರ ಪರವಾಗಿ ಹಲವಾರು ಹೋರಾಟಗಳನ್ನು ಮಾಡಿದ್ದು ಮತ್ತು ನಾವೆಲ್ಲರೂ ಬುದ್ಧ, ಬಸವ, ಡಾ|| ಬಾಬಾಸಾಹೇಬ ಅಂಬೇಡ್ಕರವರ ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು ಮತ್ತು ಡಾ. ಬಾಬಾಸಾಹೇಬ ಅಂಬೇಡ್ಕರವರು ಬರೆದಂತ ಸಂವಿಧಾನ ಅಪಾಯದಲ್ಲಿದೆ, ಇದನ್ನು ಉಳಿಸಿಕೊಳ್ಳುವ ಜವಬ್ದಾರಿ ಶೋಷಿತ ಸಮುದಾಯಗಳ ಮೇಲಿದೆ. ನಾವೆಲ್ಲರೂ ಜಾಗೃತರಾಗಬೇಕೆಂದು ಕರೆ ನೀಡಿದರು.



ಅಶೋಕ ಲಕ್ಷ್ಮಣ್ ದೊಡ್ಡಮನಿ, ಪ್ರಕಾಶ ತೋಲ್ಲಣಗಿ, ದತ್ತು ಬಂಕಲಗಿ, ತಾಲುಕಾ ಖಜಾಂಚಿ ರವಿ ಛಲವಾದಿ, ಅಫಜಲಪೂರ ತಾಲೂಕ ದಲಿತ ವಿದ್ಯಾರ್ಥಿ ಒಕ್ಕೂಟ ಸಂಚಾಲಕರಾಗಿ ಪಾಂಡುರಂಗ ಬಿಲಕರ್, ಮಲ್ಲಾಬಾದ ಗ್ರಾಮ ಶಾಖೆ ಸಂಚಾರಕರಾಗಿ ಸಾಗರ್ ಬಾಗಪ್ಪ ಮ್ಯಾಕೇರಿ, ಸಂಘಟನಾ ಸಂಚಾಕರಾಗಿ ಯಲ್ಲಾಲಿಂಗ ಖಾಜಪ್ಪ ಕಟ್ಟಿಮನಿ, ಲೋಕೇಶ ದೇವಿಂದ್ರ ಕಲ್ಲಬಂಡಿ, ಅಭಿಷೇಕ್ ದೀಲಿಪ್ ಕಟ್ಟಿಮನಿ, ಯಲ್ಲಾಲಿಂಗ ಬಾಲಚಂದ್ರ ಕಲ್ಲಬಂಡೆ, ಖಜಾಂಚಿಯಾಗಿ ಹುಚ್ಚಪ್ಪ ಖಾಜಪ್ಪ ಯಳಸಂಗಿ, ನೀಲೂರ್ ಗ್ರಾಮ ಶಾಖೆಯ ಸಂಚಾಲಕರಾಗಿ ಸಂಗಮನಾಥ ವಿ ಬಿಲಕರ್, ಸಂಘಟನಾ ಸಂಚಾಲಕರಾಗಿ ಪ್ರಭುಲಿಂಗ ಎಸ್. ಬಿಲಕರ್, ಪೈಗಂಬರ್ ಆರ್. ಮುಲ್ಲಾ, ಉಮೇಶ ಪಿ. ಬಿಲಕರ್, ಪ್ರಕಾಶ ಎಸ್. ಬಿಲಕರ್ ಖಜಾಂಚಿಯಾಗಿ ಕಾರ್ತಿಕ ಕೆ. ಸಿಂಗೆ ಇವರನ್ನು ಆಯ್ಕೆ ಮಾಡಲಾಯಿತು.

ಈ ಸಭೆಯಲ್ಲಿ ದಸಂಸ ಹಿರಿಯ ಮುಖಂಡ

ಈ ಸಂದರ್ಭದಲ್ಲಿ ಕಲಬುರಗಿ ವಿಭಾಗೀಯ ಸಂಚಾಲಕ ಧರ್ಮಣ್ಣ ಕೋಣೇಕರ್, ಕಲಬುರಗಿ ಜಿಲ್ಲಾ ಸಂಚಾಲಕ ಭೀಮಶಾ ಖನ್ನಾ, ದಲಿತ ಕಲಾ ಮಂಡಳಿ ಜಿಲ್ಲಾ ಸಂಚಾಲಕ ಭಾಗಪ್ಪ ಕಟ್ಟಿ, ದಲಿತ ವಿದ್ಯಾರ್ಥಿ ಒಕ್ಕೂಟದ ಜಿಲ್ಲಾ ಸಂಚಾಲಕ ಮಡಿವಾಳಪ್ಪ ಕಟ್ಟಿಮನಿ, ಜಿಲ್ಲಾ ಸಂಘಟನಾ ಸಂಚಾಲಕ ಯಲ್ಲಪ್ಪ ದೊಡ್ಡಮನಿ, ಕಲಬುರಗಿ ನಗರ ಸಂಘಟನಾ ಸಂಚಾಲಕರಾದ ಅರುಣಕುಮಾರ ಇನಾಮದಾರ, ರಾಣು ಮುದ್ದನಕರ್, ಫರತಾಬಾದ ಹೋಬಳಿ ಶಾಖೆಯ ಸಂಚಾಲಕ ದವಲಪ್ಪ ಆರ್. ಮಾನ್ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು. ಸಭೆಯಲ್ಲಿ ಅಫಜಲಪೂರ ತಾಲೂಕ ನೂತನ ಪದಾಧಿಕಾರಿಗಳು ಹಾಗೂ ಮಲ್ಲಾಬಾದ ಗ್ರಾಮ ಘಟಕದ ಪದಾಧಿಕಾರಿಗಳು ಹಾಗೂ ನಿಲೂರ್ ಗ್ರಾಮ ಘಟಕ ಪದಾಧಿಕಾರಿಗಳು ಸಭೆಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.



**ಕಲಬುರಗಿ: ಅಖಿಲ ಭಾರತ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಒಕ್ಕೂಟ (ಎಐಎಫ್‌ಎಡಬ್ಲ್ಯುಎಚ್) ಸಂಘಟನೆಯ ನೆತೃತ್ವದಲ್ಲಿ ಕೇಂದ್ರದ 2026–27ನೇ ಸಾಲಿನ ಬಜೆಟ್ ನಲ್ಲಿ ಅಂಗನವಾಡಿ ಮತ್ತು ಇತರ ಸ್ಕೀಮ ವರ್ಕರಗಳು ಮತ್ತು ಮೂಲಭೂತ ಸೇವೆಗಳ ದುಸ್ಥಿತಿ ಹಾಗೂ ಹಕ್ಕುಗಳ ಬಗ್ಗೆ ಮಾರಣಾಂತಿಕ ಮೌನ ವಹಿಸಿರುವುದನ್ನು ಬಲವಾಗಿ ಖಂಡಿಸಿ ಜನವಿರೋಧಿ ಕೇಂದ್ರದ ಬಜೆಟ್ ಪ್ರತಿಯ ನಕಲಿಗೆ ಬೆಂಕಿಹಚ್ಚಿ ತಮ್ಮ ಆಕ್ರೋಶವನ್ನು ವ್ಯಕ್ತಪಿಸಲಾಯಿತು. ಎಂ.ಬಿ ಸಜ್ಜನ, ಗೌರಮ್ಮ ಪಾಟೀಲ, ರತ್ನ, ಶೇಖಮ್ಮ, ನೇತ್ರಾವತಿ, ಶಾಂತಾ, ಅನುಸೂಯಾ, ರೇಣುಕಾ, ನಿರ್ಮಲಾ, ಶಿವಲಿಲಾ, ಇರ್ಫಾನಾ ಶೇಖ, ಶಾಹೀನ ಬೇಗಂ ಸೇರಿದಂತೆ ಹಲವರಿದ್ದರು.**

# ಕಾಳಗಿ: ವಕೀಲರ ಆಯ್ಕೆಗಾಗಿ ಅರ್ಜಿ ಆಹ್ವಾನ

ಕಲಬುರಗಿ:ಫೆ.2,ಕಾಳಗಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳ ವಿರುದ್ಧ ದಾವೆಗಳನ್ನು ಹಾಕಿರುವ ಸಮಯದಲ್ಲಿ ಪಟ್ಟಣ ಪಂಚಾಯತಿಯ ಪರವಾಗಿ ತಾಲೂಕು, ಜಿಲ್ಲಾ, ಹೈಕೋರ್ಟ ನ್ಯಾಯಾಲಯದಲ್ಲಿ ದಾವೆ ನಡೆಸಲು ನಿಯಮಾವಳಿ ಅನುಸಾರವಾಗಿ ವಕೀಲರನ್ನು ಆಯ್ಕೆ ಮಾಡಲು ಆಸಕ್ತಿಯುಳ್ಳ ವಕೀಲರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಾಳಗಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತಿಯುಳ್ಳ ವಕೀಲರು 2026ರ ಫೆಬ್ರವರಿ 5 ರೊಳಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ತಮ್ಮ ಲಿಖಿತ ಅರ್ಜಿಯನ್ನು ಸಲ್ಲಿಸಬೇಕು. ಬಂದಿರುವ ಅರ್ಜಿಗಳು ಕುಲಂಕುಶವಾಗಿ ಪರಿಶೀಲಿಸಿ ಕಾಳಗಿ ಆಡಳಿತಾಧಿಕಾರಿಗಳು ಹಾಗೂ ಮುಖ್ಯಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಓರ್ವ ಯೋಜನಾ ಸಲಹೆಗಾರರನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನ

ಕಲಬುರಗಿ:ಫೆ.2,–ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಾರ್ಯಾಲಯದಲ್ಲಿ ಓರ್ವ ಗುತ್ತಿಗೆ ಆಧಾರದ ಮೇಲೆ ಯೋಜನಾ

ಸಲಹೆಗಾರರನ್ನು ನೇಮಕ ಮಾಡಿಕೊಳ್ಳಲು ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹತಾ ವಿವರಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ತಿತಿತಿ.ಞಞಡಿಜಛ.ಞಚಿಡಿ.ಟಿಛಿ.ಟಿ ವೆಬ್‌ಸೈಟ್‌ದಲ್ಲಿ ಪ್ರಕಟಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ ಕಚೇರಿಯಲ್ಲಿ 2026ರ ಫೆಬ್ರವರಿ 9 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ವಿದ್ಯಾರ್ಹತೆ, ಗೌರವಧನ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಯನ್ನು ಮಂಡಳಿಯ ವೆಬ್‌ಸೈಟ್‌ದಿಂದ ಹಾಗೂ ಮಂಡಳಿ ಕಚೇರಿಯನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

# ಗುಂಡಗುರ್ತಿ ಹಜರತ ಶಮಶೋದ್ದಿನ್ ಖಾದ್ರಿ ದರ್ಗಾ ಜಾತ್ರಾ ಮಹೊತ್ಸವ ಆರಂಭ

ಕಲಬುರಗಿ: ಚಿತ್ತಾಪುರ ತಾಲೂಕಿನ ಗುಂಡಗುರ್ತಿ ಶ್ರೀನಿವಾಸ ಬಣ್ಣಕ್ಕಿ ತಿಳಿಸಿದ್ದಾರೆ.



ಗ್ರಾಮದ

ಹಜರತ ಶಮ್ಮಶೋದ್ದಿನ ಖಾದ್ರಿ ದರ್ಗಾದ ಜಾತ್ರಾ ಮಹೋತ್ಸವ ಇಂದಿನಿಂದ ಪ್ರಾರಂಭವಾಗಲಿದೆ ಎಂದು ಜಾತ್ರಾ ಮಹೋತ್ಸವದ

ಕಮಿಟಿ ಅಧ್ಯಕ್ಷರು ಹಾಗೂ ನಿರ್ದೇಶಕರು ಕರ್ನಾಟಕ ರಾಜ್ಯ ಅಪೇಕ್ಸ್ ಬ್ಯಾಂಕ್ ನ ಬೆಂಗಳೂರ ವ್ಯವಸ್ಥಾಪಕರಾದ ಸುನೀಲ ವಿ ದೊಡ್ಡಮನಿ ಹಾಗೂ ಕಮಿಟಿ ಸದಸ್ಯರು ಗ್ರಾಮ ಪಂಚಾಯತ ಅಧ್ಯಕ್ಷರಾದ

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು,ಇಂದು ಸಂಜೆ 6 ಗಂಟೆಗೆ ಗಂದ ಮೆರವಣಿಗೆ ನಡೆಯಲಿದೆ.

ಮಂಗಳವಾರ ರಾತ್ರಿ 6 ಗಂಟೆಯಿಂದ ರಾತ್ರಿ 1 ಗಂಟೆಯವರೆಗೂ ರಂಸಮಂಜರಿ ಕಾರ್ಯಕ್ರಮ ನಡೆಯಲಿವೆ.ನಂತರ ಬುಧುವಾರ ಬೆಳಿಗ್ಗೆ 9 ಗಂಟೆಗೆ ಜಂಗಿ ಪೈಲ್ವಾನರರಿಂದ ಕುಸ್ತಿಗಳು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅರೆಕಾಲಿಕ ಶಿಕ್ಷಕರ ಭರ್ತಿಗೆ ಅರ್ಜಿ

ಬಾಗಲಕೋಟೆ : ಫೆಬ್ರವರಿ 02 : ಸರಕಾರಿ ಬಾಲಕರ ಬಾಲಮಂದಿರ ಹಾಗೂ ಸರಕಾರಿ ಬಾಲಕಿಯರ ಬಾಲಮಂದಿರ ಜಿಲ್ಲಾ ಸಂಸ್ಥೆಯಲ್ಲಿ 2026–27ನೇ ಸಾಲಿಗಾಗಿ ಪ್ರೌಢಶಾಲಾ ವಿದ್ಯಾರ್ಥಿ,

ವಿದ್ಯಾರ್ಥಿನಿಯರಿಗೆ ಟ್ಯೂಶನ್ ಹೇಳಲು ಅರೆಕಾಲಿಕ ಸೇವೆ ತಾತ್ಕಾಲಿಕ ಗೌರವಧನದ ಮೇಲೆ ವಿವಿಧ ವಿಷಯ ಶಿಕ್ಷಕ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ವಿಜ್ಞಾನ ಮತ್ತು ಗಣಿತ ಶಿಕ್ಷಕರು–2 (ಬಿಎಸ್‌ಸಿ ಬಿಇಡಿ), ಇಂಗ್ಲೀಷ ಟ್ಯೂಶನ್ ಶಿಕ್ಷಕರು–2 (ಬಿಎ, ಬಿಇಡಿ), ಯೋಗ ಮತ್ತು ದೈಹಿಕ ಶಿಕ್ಷಕರು–1 (ಬಿಪಿಎಡ್),

ಸಂಗೀತ ಶಿಕ್ಷಕರು–1 ಸೇರಿ ಒಟ್ಟು 6 ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ಅರ್ಜಿಯನ್ನು ಫೆಬ್ರವರಿ 14 ರಂದು ಮಧ್ಯಾಹ್ನ 1.30 ಗಂಟೆಯೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸ್ತ್ರೀಶಕ್ತಿ ಭವನ, ಸೆಕ್ಟರ ನಂ.4, ನವನಗರ, ಬಾಗಲಕೋಟೆ ಇವರಿಗೆ ಸಲ್ಲಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದೆ.




**ಕಲಬುರಗಿಯ ಸೂಪರ್ ಮಾರ್ಕೆಟ್‌ನಲ್ಲಿರುವ ಆದರ್ಶ ಹಾಸ್ಪಿಟಲ್ (ಇನ್‌ಸ್ಟಿಟ್ಯೂಟ್ ಫಾರ್ ರೋಬೋಟಿಕ್ ಸರ್ಜರಿ)ನಲ್ಲಿ ರೋಬೋಟಿಕ್ ಶಸ್ತ್ರಚಿಕಿತ್ಸಾ ಸೌಲಭ್ಯವನ್ನು ಲೋಕಾರ್ಪಣೆಗೊಳಿಸಲಾಯಿತು. ಸಂಸ್ಥಾಪಕ ಡಾ.ಅಲೋಕ್ ಸಿ. ಪಾಟೀಲ ರೇವೂರ, ವೈದ್ಯೆ ಡಾ.ಶ್ವೇತಾ ಎ. ಪಾಟೀಲ, ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ದೊಡ್ಡಪ್ಪ ಅಪ್ಪ, ದಾಕ್ಷಾಯಣಿ ಅಪ್ಪ, ಕೆಕೆಆರ್‌ಡಿಬಿ ಮಾಜಿ ಅಧ್ಯಕ್ಷ ದತ್ತಾತ್ರೇಯ ಪಾಟೀಲ ರೇವೂರ, ಎಂಎಲ್ಸಿ ಶಶೀಲ್ ನಮೋಶಿ, ಪೊಲೀಸ್ ಕಮಿಷನರ್ ಡಾ. ಶರಣಪ್ಪ ಎಸ್‌ಡಿ., ಜಿ.ಪಂ ಸಿಇಒ ಭಂವರ್ ಸಿಂಗ್ ಮೀನಾ ಸೇರಿದಂತೆ ಹಲವರು ಹಾಜರಿದ್ದರು.**

# ಕಾನೂನು ಸಲಹೆಗಾರರ ನೇಮಕಕ್ಕೆ ಅರ್ಜಿ

ಬಾಗಲಕೋಟೆ : ಫೆಬ್ರವರಿ 02 : ಕಂದಾಯ ಇಲಾಖೆಗೆ ಸಂಬಂಧಿಸಿದ ಭೂ ಕಂದಾಯ, ಭೂಮಂಜೂರಾತಿ ನಿಯಮ, ಭೂಸುಧಾರಣಾ, ಭೂಸ್ವಾಧೀನ ಕಾಯ್ದೆ, ನಿಯಮ ಇನ್ನಿತರ ಕಾಯ್ದೆ, ನಿಯಮಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಹಾಗೂ ಯಾವುದೇ ನ್ಯಾಯಾಲಯ ವ್ಯಾಜ್ಯಗಳ ಬಗ್ಗೆ ಕಾನೂನು ಸಲಹೆ ನೀಡಲು ಸೃಜಿಸಲಾಗಿರುವ ಕಾನೂನು ಸಲಹೆಗಾರರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ನ್ಯಾಯಾಧೀಶರು,

ನಿವೃತ್ತ ಕಂದಾಯ ಇಲಾಖೆಯ ಅಧಿಕಾರಿಗಳು (ನಿವೃತ್ತ ವಿಶೇಷ ಜಿಲ್ಲಾಧಿಕಾರಿ, ನಿವೃತ್ತ ತಹಶೀಲ್ದಾರ, ಉಪತಹಶೀಲ್ದಾರ, ಸಿವಿಲ್ ನ್ಯಾಯಾಧೀಶರು) ಇವರಲ್ಲಿ ಒಬ್ಬರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ತಮ್ಮ ಸಂಪೂರ್ಣ ಬಯೋಡಾಟಾ ಹಾಗೂ ಅಗತ್ಯ ದಾಖಲೆಗಳೊಂದಿಗೆ ಫೆಬ್ರವರಿ 10 ರೊಳಗಾಗಿ ಜಿಲ್ಲಾಧಿಕಾರಿಗಳು,

ಬಾಗಲಕೋಟೆರವರ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಬದಿ ಆಹಾರಗಳಲ್ಲಿ ನಿಷೇಧಿತ ವಸ್ತು, ಕೃತಕ ಬಣ್ಣ ಬಳಸದಂತೆ ಎಚ್ಚರಿಕೆ ವಹಿಸಿ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಫೆಬ್ರವರಿ 02,: ರಸ್ತೆ ಬದಿ ದೊರೆಯುವ ಗೋಬಿ ಮಂಚೂರಿ, ಪಾನಿಪೂರಿ ಮುಂತದಾ ಚಾಟ್ಸ್‌ಗಳಲ್ಲಿ ಕೃತಕ ಬಣ್ಣ ಹಾಗೂ ನಿಷೇಧಿತ ವಸ್ತುಗಳನ್ನು ಬೆರೆಸದಂತೆ ಸರ್ಕಾರ ಆದೇಶಿಸಿದೆ. ಅದರಂತೆ ಸರ್ಕಾರದ ಆದೇಶ ಪಾಲನೆಯಾಗುತ್ತಿರುವ ಬಗ್ಗೆ ಇಲಾಖೆ ಎಚ್ಚರಿಕೆ ವಹಿಸಿ, ಖಾತ್ರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರದ ಜಿಲ್ಲಾ ಮಟ್ಟದ ಸಲಹಾ ಸಮಿತಿಯ ಅಧ್ಯಕ್ಷರಾದ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಹೋಟೆಲ್, ರೆಸ್ಟೋರೆಂಟ್‌ಗಳಲ್ಲಿ ತಯಾರಾಗುವ ಆಹಾರ ಹಾಗೂ ರಸ್ತೆ ಬದಿ ಮಾರಾಟ ಮಾಡುವ ಗೋಬಿ ಮಂಚೂರಿ, ಪಾನಿ ಪೂರಿಯಂತಹ ಚಾಟ್ಸ್, ಫಾಸ್ಟ್ ಫುಡ್‌ಗಳಲ್ಲಿ ಕೃತಕ ಬಣ್ಣಗಳನ್ನು ಹಾಗೂ ಆಹಾರದ ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳನ್ನು ಬಳಸದಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಆದಾಗ್ಯೂ ಕೆಲ ಅಂಗಡಿಗಳಲ್ಲಿ ನಿಷೇಧಿತ ವಸ್ತುಗಳು ಹಾಗೂ ಕೃತಕ ಬಣ್ಣಗಳ ಬಳಕೆ ನಡೆಯುತ್ತಿದೆ. ಇಂತಹ ಹೋಟೆಲ್, ರಸ್ತೆ ಬದಿ ಅಂಗಡಿಗಳನ್ನು ಗುರುತಿಸಿ, ಅದರ ಮಾಲೀಕರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಿ. ರುಚಿ ಹೆಚ್ಚಿಸುವ ನಿಷೇಧಿತ ವಸ್ತುಗಳು ಆರೋಗ್ಯಕ್ಕೆ ತುಂಬಾ ಹಾನಿಕಾರಕ. ಆದ್ದರಿಂದ ಯಾವುದೇ ಹೋಟೆಲ್, ರಸ್ತೆ ಬದಿ ಅಂಗಡಿಗಳಲ್ಲಿ ಇಂತಹ ನಿಷೇಧಿತ ವಸ್ತುಗಳ ಬಳಕೆ ಮಾಡುತ್ತಿಲ್ಲ ಎಂಬುದನ್ನು ಖಾತ್ರಿಪಡಿಸಿಕೊಂಡು, ಸರ್ಕಾರದ ಆದೇಶದ ಕಟ್ಟುನಿಟ್ಟಿನ ಪಾಲನೆಗೆ ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಪ್ರಾಧಿಕಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲ ವಸತಿ ಶಾಲೆಗಳಲ್ಲಿ, ಅಂಗನವಾಡಿಗಳಲ್ಲಿ ಹಾಗೂ ಶಾಲೆಗಳಲ್ಲಿ ನೀಡುವ ಆಹಾರಗಳಲ್ಲಿ ಬಳಸುವ ದಿನಸಿ ವಸ್ತುಗಳ ಗುಣಮಟ್ಟ ಪರೀಕ್ಷೆಯನ್ನು ಕಡ್ಡಾಯವಾಗಿ ಮಾಡಬೇಕು. ಹಾಗೂ ಆಹಾರ ಸಾಮಗ್ರಿ ಶೇಖರಿಸುವ ಗೋದಾಮುಗಳಲ್ಲಿ ನಿಯಮಾನುಸಾರ ಸ್ವಚ್ಛತೆ ಹಾಗೂ ಸುರಕ್ಷತೆ ನಿರ್ವಹಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಹಳ್ಳಿಗಳಲ್ಲಿ ಹಾಲು ಸಂಗ್ರಹಣಾ ಕೇಂದ್ರಗಳಿಗೆ ಗುಣ ಮಟ್ಟ ಪರೀಕ್ಷೆಯ ಮಾನದಂಡಗಳನ್ನು ನೀಡಲಾಗಿದೆ. ಆ ಮಾನದಂಡಗಳನ್ವಯ ಗುಣಮಟ್ಟದ ಹಾಲನ್ನು ಮಾತ್ರ ಹಾಲು ಮಾರಾಟಗಾರರಿಂದ ಸಂಗ್ರಹಿಸಬೇಕು. ಇಂತಹ ಹಾಲು ಸಂಗ್ರಹಣಾ ಕೇಂದ್ರಗಳಲ್ಲಿ ದೊರೆಯುವ ಹಾಲನ್ನು ಪರೀಕ್ಷೆಗೊಳಪಡಿಸಿ. ಯೂರಿಯಾ ಬಳಸಿ ನಕಲಿ ಹಾಲು ಹಾಗೂ ಹಾಲಿನ ಉತ್ಪನ್ನಗಳಾದ ಪನೀರ್, ಚೀಸ್ ಮುಂತಾದವುಗಳನ್ನು ತಯಾರಿಸಲಾಗುತ್ತದೆ. ಅಂತಹವುಗಳನ್ನು ಗುರುತಿಸಿ ಮಾರಾಟವಾಗದಂತೆ ಎಚ್ಚರಿಕೆ ವಹಿಸಬೇಕು. ಬೇಕರಿ ಹಾಗೂ ಎಗ್‌ರೈಸ್ ಅಂಗಡಿಗಳಲ್ಲಿ ಒಡೆದ ಹಾಗೂ ಕೆಟ್ಟ ಮೊಟ್ಟೆಗಳನ್ನು ಬಳಸುತ್ತಿರುವ ಕುರಿತು ದೂರುಗಳಿವೆ. ಈ ಬಗ್ಗೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮಾದರಿ ಪರೀಕ್ಷೆ ಮಾಡಿ, ತಪ್ಪು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ನ್ಯಾಯಬೆಲೆ ಅಂಗಡಿಗಳಲ್ಲಿಯೂ ಇಲಾಖೆಯಿಂದ ಮಾದರಿ ಪರೀಕ್ಷೆ ನಡೆಸಬೇಕು. ಸರ್ಕಾರದಿಂದ ಜನರಿಗೆ ನೀಡುವ ಯಾವುದೇ ಆಹಾರ ಸಾಮಗ್ರಿ, ದಿನಸಿ ಮುಂತಾದವು ಗುಣಮಟ್ಟದಿಂದ ಕೂಡಿರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ, ಸಾರ್ವಜನಿಕರು ಹೋಟೆಲ್ ಹಾಗೂ ರಸ್ತೆ ಬದಿ ಅಂಗಡಿಗಳಲ್ಲಿ ದೊರೆಯುವ ಆಹಾರ ಸೇವಿಸುವ ಮುನ್ನ ಎಚ್ಚರಿಕೆ ವಹಿಸಬೇಕು. ಗುಣಮಟ್ಟದ ಆಹಾರ ಸೇವನೆಗೆ ಆದ್ಯತೆ ನೀಡಬೇಕು. ಕಿರಾಣಿ ಹಾಗೂ ಮಾರ್ಟ್‌ಗಳಲ್ಲಿ ದೊರೆಯುವ ದಿನಸಿ ಸಾಮಗ್ರಿಗಳ ಮೇಲೆ ಕಡ್ಡಾಯವಾಗಿ ಸುರಕ್ಷಿತ ಬಳಕೆಯ ಅವಧಿಯನ್ನು ನಮೂದಿಸಬೇಕು. ಗ್ರಾಹಕರು ಅವಧಿ ನಮೂದಿಸಿದ ಬಗ್ಗೆ ಖಾತ್ರಿಪಡಿಸಿಕೊಂಡು ಸರಕು ಕೊಳ್ಳಬೇಕು. ಮಕ್ಕಳಿಗೆ ನೀಡುವ ಸಿಹಿತಿಂಡಿ, ಐಸ್‌ಕ್ರೀಮ್ ಮುಂತಾದ ತಿನಿಸುಗಳಲ್ಲಿ ಬಳಸಲಾದ ಅನುಮತಿಸಲಾದ ವಸ್ತುಗಳ ವಿವರಣೆ ನಂತರವೇ ಮಕ್ಕಳಿಗೆ ತಿನಿಸುಗಳನ್ನು ನೀಡಬೇಕು. ಕುರುಕಲು ತಿಂಡಿಗಳಲ್ಲಿ ಬಳಸುವ ಎಣ್ಣೆ ಕಳಪೆಯಾಗಿರುವ ಸಾಧ್ಯತೆ ಇರುತ್ತದೆ. ಆದ್ದರಿಂದ ಅಂತಹ ತಿನಿಸುಗಳ ಬಗ್ಗೆ ಜಾಗ್ರತೆ ವಹಿಸಬೇಕು. ಈ ಬಗ್ಗೆ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡಿ, ಜಾಗೃತಿ ಮೂಡಿಸಬೇಕು ಎಂದು ಅವರು ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಡಾ.ಅಲಕನಂದಾ ಮಳಗಿ ಇಲಾಖೆ ಕೈಗೊಂಡ ಕ್ರಮಗಳು, ಆಹಾರ ಸುರಕ್ಷತಾ ಮಾನದಂಡಗಳು ಕುರಿತು ವಿವರವಾದ ಮಾಹಿತಿ ನೀಡಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಆಹಾರ ಇಲಾಖೆ ಉಪನಿರ್ದೇಶಕ ವಿಶ್ವನಾಥ, ಅಬಕಾರಿ ಇಲಾಖೆ ಡಿವೈಎಸ್‌ಪಿ ಬಿ.ಆಂಜನೇಯ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಅನುಮಾನಾಸ್ಪದಗಳಿಗೆ ಅವಕಾಶ ನೀಡದೇ ಉಪ ಚುನಾವಣೆ ನಡೆಸಿ: ರಾಮಪ್ರಶಾಂತ ಮನೋಹರ

ಬಾಗಲಕೋಟೆ : ಫೆ.1 : ಅನುಮಾನಾಸ್ಪದಗಳಿಗೆ ಅವಕಾಶ ನೀಡದೇ ಪಾರದರ್ಶಕ ಹಾಗೂ ನಿಷಪಕ್ಷವಾಗಿ ಮುಂಬರುವ ಬಾಗಲಕೋಟ ಮತಕ್ಷೇತ್ರದ ಉಪಚುನಾಣೆಯನ್ನು ನಡೆಸುವ ಕಾರ್ಯವಾಗಬೇಕು ಎಂದು 24-ಬಾಗಲಕೋಟೆ ವಿಧಾನಸಭೆ ಉಪಚುನಾವಣೆ 2026 ಸಂಬಂದ ರೋಲ್ ಅಬ್ಜರ್ವರ ಆಗಿರುವ ರಾಮಪ್ರಶಾಂತ ಮನೋಹರ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ರವಿವಾರ ಸಂಜೆ ಬಾಗಲಕೋಟೆ ವಿಧಾನಸಭೆ ಉಪ ಚುನಾವಣೆ ಸಂಬಂಧಿಸಿದಂತೆ ಮತದಾರರ ಪಟ್ಟಿ ವಿಶೇಷ ಪರೀಸ್ಕರಣೆಗೆ ಸಂಬಂಧಪಟ್ಟಂತೆ ಪೂರ್ವ ಸಿದ್ದತೆ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ಚುನಾವಣೆ ನಡೆದರೂ ಸಹ ಚುನಾವಣಾ ಪ್ರಕ್ರಿಯೆಗಳನ್ನು ಜಾಗ್ರತೆಯಿಂದ ನಿರ್ವಹಿಸಬೇಕಾಗುತ್ತದೆ. ಮತದಾರರ ಪಟ್ಟಿಯನ್ನು ತಯಾರಿಸುವದರಿಂದಲೇ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗುತ್ತದೆ. ಪ್ರಾರಂಭದಲ್ಲಿಯೇ ಲೋಪದೋಷಗಳಿದ್ದಲ್ಲಿ ರಾಜಕೀಯ ಪಕ್ಷಗಳು ಗಮನಕ್ಕೆ ತರುವ ಕೆಲಸ ಮಾಡಿದಲ್ಲಿ ಅಂತಹ ದೋಷಗಳನ್ನು ಸರಿಪಡಿಸಿ ಚುನಾವಣೆಯನ್ನು ಸುಗಮವಾಗಿ ಮುಗಿಸಲು ಸಾಧ್ಯವಾಗುತ್ತದೆ. ಅಂತಹ ಯಾವುಧೆ ಲೋಪಗಳಿದ್ದಲ್ಲಿ ತಕ್ಷಣ ಸೂಚಿಸುವ ಕಾರ್ಯಮಾಡಿರಿ ಎಂದರು.

2026 ಜನೇವರಿ 3 ರಿಂದ 31 ರವರೆಗೆ ಫಾರಮ್6 ಸಂಬಂಧಿಸಿದಂತೆ, 4703, ಫಾರಮ್7 ರಡಿ 1821, ಫಾರಮ್ 8 ರ ತಿದ್ದುಪಡಿಗೆ ಸಂಬಂಧಿಸಿದಂತೆ 5700 ಹಾಗೂ ಫಾರಮ್ 8 ರಡಿಯ ವರ್ಗಾವಣೆಗೆ ಸಂಬಂಧಿಸಿದಂತೆ 313 ಸೇರಿ ಒಟ್ಟಾರೆಯಾಗಿ 12537 ಫಾರಮ್‌ಗಳು ಸ್ವೀಕೃತವಾಗಿರುತ್ತವೆ. ಮತದಾರರ ಪಟ್ಟಿಗೆ ಸಂಬಂಧಿಸಿದ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲು ಫೆ 7 ರವರೆಗೆ ಕಾಲಾವಕಾಶವಿದೆ. ಈಗಾಗಲೇ ಬಿಎಲ್‌ಒ ಗಳಿಗೆ ತರಬೇತಿ ನೀಡಲಾಗಿದ್ದು, . ಎಲ್ಲವೂ



ಅಚ್ಚುಕಟ್ಟಾಗಿ ನಡೆಯುತ್ತಿದೆ. ಫಾರ್ಮ 6 ಮತ್ತು 7 ಕ್ಕೆ ಸಂಬಂಧಿಸಿದ ಆಕ್ಷೇಪಣೆಗಳೇನಾದರೂ ಅಥವಾ ಬೇರೆ ಮತಕ್ಷೇತ್ರದವರು ಇಲ್ಲಿಗೆ ಬರುವ ಸಂಭವನಿಯತೆ ಇದ್ದಲ್ಲಿ ರಾಜಕೀಯ ಪಕ್ಷಗಳು ತಿಳಿಸಬೇಕು, ಎಲ್ಲವನ್ನೂ ಸರಿಪಡಿಸಿ ಫೆ. 14 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟ ಸಲಾಗುವುದು. ಈ ಸಂಧರ್ಭದಲ್ಲಿ ಎಲ್ಲಾರಾಜಕೀಯ ಪಕ್ಷಗಳ ಮುಖಂಡರು, ಪ್ರತಿನಿಧಿಗಳ ಸಹಕಾರ ಮುಖ್ಯವಾಗಿದ್ದು ಎಲ್ಲರೂ ಸಹಕರಿಸಬೇಕು ಎಂದು ಕೋರಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಬಾಗಲಕೋಟ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಸಡಗರ ಸಂಭ್ರಮದಿಂದ ಕೋಟೆ ಮಲ್ಲೇಶ್ವರ ಸ್ವಾಮಿ ಬ್ರಹ್ಮರಥೋತ್ಸವ

ಬಳ್ಳಾರಿ. ಫೆ. 01 : ನಗರದ ಆರಾಧ್ಯ ದೈವ ಕೋಟೆ ಮಲ್ಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವವ ಇಂದು ಸಂಜೆ ಸಾವಿರಾರು ಭಕ್ತರ ಶ್ರದ್ಧೆ ಮತ್ತು ಹರ್ಷೋದ್ಗಾರಗಳ ನಡುವೆ ವಿಜೃಂಭಣೆಯಿಂದ ನಡೆಯಿತು, ನಗರದ ತೇರು ಬಜಾರು ರಸ್ತೆಯಲ್ಲಿರುವ ಸಣ್ಣ ಮಲ್ಲೇಶ್ವರ ಗುಡಿ ಮುಂದೆ ಬೆಳಿಗ್ಗೆಯಿಂದಲೇ ರಥಕ್ಕೆ ವಿಶೇಷ ಪೂಜೆ ನಡೆಯಿತು. ಬೆಳಗಿನದಲ್ಲಿ ಮಲ್ಲೇಶ್ವರ ಸ್ವಾಮಿ ದೇವಸ್ಥಾನದಲ್ಲಿ ವಿವಿಧ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಿ



ಮುಂಜಾನೆ 10.15ರ ಕ್ಕೆ ನೂರಾರು ಭಕ್ತರು ಸೇರಿಕೊಂಡು ಮಡಿ ತೇರನ್ನು ಎಳೆದರು. ಸಂಜೆ 4.15ಕ್ಕೆ ತೆರಿಗೆ ವಿವಿಧ ಪುಷ್ಪ ಅಲಂಕಾರಗಳೊಂದಿಗೆ ಮತ್ತು ಬಾಳೆ ದಿಂಡು ಹಾಗೂ ಬಣ್ಣ ಬಣ್ಣದ ಹೂಗಳಿಂದ ಅಲಂಕರಿಸಿ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಬ್ರಹ್ಮ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ನಗರದ ಭಕ್ತರೊಂದಿಗೆ ಸುತ್ತ ಮುತ್ತಲಿನ ಹತ್ತಾರು ಗ್ರಾಮಗಳ ಸಾವಿರಾರು ಭಕ್ತರ ಸಂಭ್ರಮದ ನಡುವೆ ತೇರು ಸಾಗಿತು.

ಬ್ರೂಸ್‌ಪೇಟೆ ಠಾಣೆ ಮುಂಭಾಗ ದಿಂದ ಮುಂದುವರಿದ ತೇರು ದೊಡ್ಡ ಮಾರುಕಟ್ಟೆ, ನೀಲಕಂಠೇಶ್ವರ ಗುಡಿ ಮೂಲಕ ಕಣೇಕಲ್ಲು ಬಸ್ ನಿಲ್ದಾಣ ಸಮೀಪದವರೆಗೂ ಸಾಗಿ ಹಿಂದಿರುಗಿತು. ಬಜಾರು ರಸ್ತೆಯ ಅಕ್ಕ ಪಕ್ಕದಲ್ಲಿ, ಕಟ್ಟಡಗಳ ಮೇಲ್ಭಾಗದಲ್ಲಿ ನಿಂತು ಭಕ್ತರು ತೇರಿಗೆ ಹೂವು ಹಣ್ಣು ಅರ್ಪಿಸಿ ಹರಕೆ ತೀರಿಸಿದರು.

ರಥವನ್ನು ಎಳೆಯಲು ಭಕ್ತರು ನಾ ಮುಂದು ತಾ ಮುಂದು ಎಂದು ನೂಕು ನುಗ್ಗಲಿನಲ್ಲಿ ರಥದ ಸಮೀಪಕ್ಕೆ ಹೋಗಲು ಪ್ರಯತ್ನಿಸಿದಾಗ ಒಬ್ಬರಿಗೊಬ್ಬರು ತಳ್ಳಾಡಿದ ಪ್ರಸಂಗ ಜರುಗಿತು. ಪರಿಣಾಮವಾಗಿ ತಳ್ಳಾಟ ನಿಯಂತ್ರಿಸಲು ಪೊಲೀಸರು ಹರಸಾಹಸ ಪಡುತ್ತಿದ್ದು ಕಂಡು ಬಂತು . ತೇರಿಗೆ ಎಸೆದ ಬಾಳೆಹಣ್ಣುಗಳ ಮೇಲೆ ಕಾಲಿಟ್ಟ ಭಕ್ತರು ಜಾರಿ ಬಿದ್ದ ಪ್ರಸಂಗವೂ ನಡೆಯಿತು.

ತೇರು ಬಜಾರಿಗೆ ಸಂಪರ್ಕ ಕಲ್ಪಿಸುವ ಎಲ್ಲ ರಸ್ತೆಗಳಲ್ಲೂ ಲಕ್ಷಾಂತರ ಭಕ್ತರು ಮತ್ತು ವಾಹನ ದಟ್ಟಣೆ ಅತಿಹೆಚ್ಚಿನಲ್ಲಿ ಸೇರಿತ್ತು. ಈ ಬ್ರಹ್ಮರಥೋತ್ಸವ ಕಾರ್ಯಕ್ರಮದಲ್ಲಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮೇಯರ್ ಪಿ ಗಾದೆಪ್ಪ, ಮಹಾನಗರ ಪಾಲಿಕೆ ಸದಸ್ಯರಾದ ವಿಕ್ಕಿ, ರಾಮಾಂಜಿನಿ, ಬಿ ಆರ್ ಎಲ್ ಸೀನಾ, ಮುಖಂಡರಾದ ವಿಷ್ಣುಬೋಯಪಾಟಿ, ಚಾನಾಳ್ ಶೇಖರ್ ಸೇರಿದಂತೆ ಇತರ ಮುಖಂಡರುಗಳಿದ್ದರು.

## 9-11ನೇ ತರಗತಿ ಪ್ರವೇಶ ಪರೀಕ್ಷೆ ಫೆ.7ಕ್ಕೆ

ಬೀದರ, ಫೆಬ್ರವರಿ.02 :- ಬಸವಕಲ್ಯಾಣ ತಾಲೂಕಿನಲ್ಲಿರುವ ಜವಾಹರ್ ನವೋದಯ ವಿದ್ಯಾಲಯದಲ್ಲಿ 9 ಮತ್ತು 11ನೇ ತರಗತಿಯ ಖಾಲಿ ಇರುವ ಸ್ಥಾನಗಳಿಗಾಗಿ (2026-27 ಸಾಲಿನ) ಪ್ರವೇಶ ಪರೀಕ್ಷೆ ದಿನಾಂಕ 07-02-2026 ರಂದು ನಡೆಯಲಿದೆ.

ಈ ಪ್ರವೇಶ ಪರೀಕ್ಷೆಯು ನೂರು ಅಂಕದ 100 ಪ್ರಶ್ನೆಗಳನ್ನು ಹೊಂದಿರುತ್ತದೆ. ಅವೆಲ್ಲವೂ ವಸ್ತುನಿಷ್ಠ ಪ್ರಶ್ನೆಗಳಾಗಿಲಿವೆ. ಪರೀಕ್ಷೆಯ ಅವಧಿ 2.30 ಗಂಟೆಗಳು. ಹಿಂದಿ, ಆಂಗ್ಲ ಭಾಷೆಗಳ ಸಾಮಾನ್ಯ ಜ್ಞಾನ, ಗಣಿತ ಮತ್ತು ಸಾಮಾನ್ಯ ವಿಜ್ಞಾನದ ವಿಷಯವನ್ನಾಧರಿಸಿ ಪ್ರಶ್ನೆಗಳಿರುತ್ತವೆ. ಪರೀಕ್ಷೆಯು ಬೆಳಗ್ಗೆ 11:30 ಗಂಟೆಗೆ ಆರಂಭವಾಗಿ 1.30 ಗಂಟೆಗೆ ಮುಕ್ತಾಯಗೊಳ್ಳುತ್ತದೆ.

ಪರೀಕ್ಷೆಯು ಬಸವಕಲ್ಯಾಣ ತಾಲೂಕಿನ ಮೂರು ಕೇಂದ್ರಗಳಲ್ಲಿ ಮತ್ತು ಬಾಲ್ಕೀಯ ಒಂದು ಕೇಂದ್ರದಲ್ಲಿ ನಡೆಸಲಾಗುತ್ತಿದೆ. ಪರೀಕ್ಷಾರ್ಥಿಗಳು 10.30 ಗಂಟೆಗೆ ತಮಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಪತ್ರದೊಂದಿಗೆ ಹಾಜರಿರಬೇಕು. ಪರೀಕ್ಷೆಗೆ ಬರುವಾಗ ಪ್ರವೇಶ ಪತ್ರ ಹಾಗೂ ಆಧಾರ್ ಕಾರ್ಡಿನ ಜೆರಾಕ್ಸ್ ಪ್ರತಿಯನ್ನು ತರಬೇಕು. ಅರ್ಜಿ ಸಲ್ಲಿಸಿದ ಎಲ್ಲ ವಿದ್ಯಾರ್ಥಿಗಳು ಈ ಪ್ರವೇಶ ಪರೀಕ್ಷೆಯಲ್ಲಿ ಹಾಜರಾಗಬೇಕೆಂದು ಜವಾಹರ್ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಸೌಲಭ್ಯ: ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಬೀದರ, ಫೆಬ್ರವರಿ.02:- ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಳಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ 'ಶುಲ್ಕ ಮರುಪಾವತಿ' ಕಾರ್ಯಕ್ರಮದಲ್ಲಿ ಸೌಲಭ್ಯಕ್ಕಾಗಿ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ: 15-02-2026 ರವರೆಗೆ ವಿಸ್ತರಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ವಿದ್ಯಾರ್ಥಿಗಳು ಅನ್‌ಲೈನ್ https://ssp.postmatric.karnataka.gov.in/ ದಲ್ಲಿ ದಿನಾಂಕ: 15-02-2026 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in/ \ಅಥವಾ ಸಹಾಯವಾಣಿ ಸಂಖ್ಯೆ: 8050770005, ದೂರವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದಾಗಿದೆ ಅವರು ತಿಳಿಸಿದ್ದಾರೆ.

# ಈ ಬಾರಿಯ ಬಜೆಟ್ ಸತ್ತ ಹೆಣಕ್ಕೆ ಸಿಂಗಾರ ಮಾಡಿದಂತಿದೆ- ವೆಂಕಟೇಶ್ ಹೆಗಡೆ



ಬಳ್ಳಾರಿ ಫೆ 01. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯನ್ನು ಮೂಲೆ ಇಗುಂಪು ಮಾಡಿ, ಗ್ರಾಮೀಣ ಭಾಗದ ಅಭಿವೃದ್ಧಿಗೆ ಮಾರಕವಾಗಿದ್ದ ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ಇದೀಗ ಗ್ರಾಮೀಣಾಭಿವೃದ್ಧಿಗೆ ಕೇವಲ 1.6 ಲಕ್ಷ ಕೋಟಿ ಅನುದಾನ ನೀಡಿ ಗ್ರಾಮೀಣ ಜನರನ್ನು ಇನ್ನಷ್ಟು ಅದೋಗತಿಗೆ ತಳ್ಳಲು ಸಿದ್ಧವಾಗಿದೆ. ಒಂದು ಕಡೆ ಬಜೆಟ್ ಮಂಡನೆ ಆಗುತ್ತಿರುವಾಗಲೇ ಭಾರತದ ಷೇರು ಮಾಕಟ್ಟೆ ಪ್ರಪಾತಕ್ಕೆ ಕುಸಿದಿದ್ದು, ಈ ಬಾರಿಯ ಬಜೆಟ್ ಎಷ್ಟರ ಮಟ್ಟಿಗೆ ಜನ ಉಪಯೋಗಿ ಎಂಬುದನ್ನು ಮನಗಾಣಬಹುದು. ಇನ್ನು ಮುಂದೆ ಚುನಾವಣೆ ಇರುವ ಪಶ್ಚಿಮ ಬಂಗಾಲ, ಕೇರಳ ಮುಂತಾದ ರಾಜ್ಯಗಳಿಗೆ ಕೊಡುಗೆ ನೀಡುವ ಸುಳ್ಳು ಘೋಷಣೆಗಳನ್ನು ನೀಡಿರುವ ಕೇಂದ್ರದ ಮೋದಿ ಸರ್ಕಾರ ಜನಸಾಮಾನ್ಯರ ಬಗ್ಗೆ ಯಾವುದೇ ಗಮನ ಹರಿಸಿಲ್ಲ. ಐದು ಜಲಮಾರ್ಗ ಘೋಷಣೆ ಮಾಡುವ ಮೂಲಕ ತಮಿಳುನಾಡು, ಪಶ್ಚಿಮ ಬಂಗಾಳ, ಕೇರಳ ಸೇರಿದಂತೆ ದೇಶದ 20 ಕಡೆ ಹೊಸ ಜಲಮಾರ್ಗ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಇದರ ಜೊತೆಗೆ ಮೀನುಗಾರರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಜಲಾಶಯ ನಿರ್ಮಾಣ ಮಾಡುವುದಾಗಿ ಘೋಷಣೆ ಮಾಡಿ, ಅಲ್ಲಿರುವ ಮೀನುಗಾರರನ್ನು ಮುಂದಿನ ಚುನಾವಣೆಯಲ್ಲಿ ಅವರ ಮತ ಗಳಿಸುವ ಹುನ್ನಾರ ಇದೆ ಹೊರತು ಇದು ನಿಜಕ್ಕೂ ಜಾರಿಯಾಗುವ ಯೋಜನೆ ಅಲ್ಲ. ಐದು ಹೊಸ ರೈಲ್ವೆ ಕಾರಿಡಾರ್ ಘೋಷಣೆ ಮಾಡಿರುವುದು ಇವರು ಅದೆಷ್ಟು ಕಾರ್ಪೋರೇಟ್ ಪರ ಇದ್ದಾರೆ ಎಂಬುದನ್ನು ಸ್ಪಷ್ಟವಾಗಿ ತೋರಿಸಿಕೊಟ್ಟಿದ್ದಾರೆ. ತೆರಿಗೆ ಇಳಿಕೆ ಮಾಡಿರುವ ಉತ್ಪನ್ನಗಳನ್ನು ಗಮನಿಸಿದರೆ ಎಲ್ಲವೂ ಕಾರ್ಪೋರೇಟ್ ಪರವಾ ಗಿಯೇ ಇವೆ. ವಿಮಾನದ ಬಿಡಿ ಭಾಗಗಳ ಮೇಲಿನ ತೆರಿಗೆ ಇಳಿಸಿರುವುದು ಭಾರತೀಯ ವಿಮಾನ ಯಾನ ರಂಗಕ್ಕೆ ಅದಾನಿಯವರು ಕಾಲಿ ಡುತ್ತಿರುವ ಸಂಬಂಧ ಅವರ ಮನವೊಲಿಕೆಗೆ ಕೈಗೊಂಡ ತೀರ್ಮಾನದಂತೆ ಇದೆ. ಇನ್ನು ಜಿಡಿಪಿ ಬೆಳವಣಿಗೆ ಕುರಿತು ಕೇಂದ್ರ ವಿತ್ತ ಸಚಿವೆ ಲೋಕಸಭೆಯಲ್ಲಿ ಪ್ರಸ್ತಾಪಮಾಡಿ ದೊಡ್ಡ ಸಾಧನೆ ಮಾಡಿದವರ ಹಾಗೆ ಬಿಂಬಿಸಿಕೊಂಡಿದ್ದಾರೆ. ಆದರೆ, ಇಡೀ ದೇಶದ ಜಿಡಿಪಿಯ ಆದಾಯ ಯಾರ ಜೇಬಿಗೆ ಸೇರುತ್ತಿದೆ ಎಂಬುದನ್ನು ಅವರು ಹೇಳಲು ಸಿದ್ಧರಿಲ್ಲ. ಜನಸಾಮಾನ್ಯರಿಗೆ ಯಾವುದೇ ರೀತಿಯ ಕೊಡುಗೆ ಈ ಜಿಡಿಪಿ ಬೆಳವಣಿಗೆಯಿಂದ ಸಿಗುವುದಿಲ್ಲ ಎಂಬುದನ್ನು ಅವರು ಮರೆಮಾಚಿದ್ದಾರೆ. ಜನಸಾಮಾನ್ಯರಿಗೆ ಭಾರೀ ಕೊಡುಗೆಗಳು ಸಿಗಬಹುದು ಎಂಬ ನಿರೀಕ್ಷೆಯಲ್ಲಿದ್ದವರಿಗೆ ದೊಡ್ಡ ನಿರಾಶೆ ಆಗಿದೆ. ಈ ಬಾರಿಯ ಬಜೆಟ್ ಸತ್ತ ಹೆಣಕ್ಕೆ ಸಿಂಗಾರ ಮಾಡಿದಂತೆ ಆಗಿದೆ ಎಂದು ವೆಂಕಟೇಶ್ ಹೆಗಡೆ, ವಕೀಲರು ಕೆಪಿಸಿಸಿ ರಾಜ್ಯ ಮಾಧ್ಯಮ ವಕ್ತಾರರು ಹಾಗೂ ಕೆಪಿಸಿಸಿ ರಾಜ್ಯ ಸಂಯೋಜಕರು ಪ್ರಚಾರ ಸಮಿತಿ.ಬಳ್ಳಾರಿ. ಇವರು ಆಗ್ರಹಿಸಿದರು.

# ಕೊಪ್ಪಳ ಎಂ.ಹೆಚ್.ಪಿ.ಎಸ್ ಶಾಲೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ

ಕೊಪ್ಪಳ ಫೆಬ್ರುವರಿ 02: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಶಾಸಕರ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಶಾಲಾ ಆವರಣದಲ್ಲಿ "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ-2026" ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.



ಕೊಪ್ಪಳ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಉಮಚಗಿ ಅವರು ಕಾರ್ಯಕ್ರಮ ಕುರಿತು ಮಾತನಾಡಿ, "ತಾರತಮ್ಯವನ್ನು ಕೊನೆಗೊಳಿಸುವುದು ಘನತೆಯನ್ನು ಕಾಪಾಡುವುದು" ಎಂಬ ಈ ವರ್ಷದ ಘೋಷ ವಾಕ್ಯದೊಂದಿಗೆ ಕಾರ್ಯಕ್ರಮ ಆಚರಿಸಲಾಗುತ್ತದೆ. ಜನವರಿ 30 ರಿಂದ ಫೆಬ್ರವರಿ 13 ರವರೆಗೆ "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮ-2026" ಹಮ್ಮಿಕೊಳ್ಳಲಾಗಿದೆ. ಇದರ ಉದ್ದೇಶ ಪ್ರತಿಯೊಬ್ಬರಿಗೂ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಿ, ಶೀಘ್ರ ಪತ್ತೆ ತ್ವರಿತ ಚಿಕಿತ್ಸೆ ಪಡೆದುಕೊಳ್ಳುವುದು ಹಾಗೂ ಸಾಮಾಜಿಕ ಕಳಂಕದಿಂದ ಹೊರಬರುವುದು. ಇದು ಮೈಕೊಬ್ಯಾಕ್ಟೇರಿಯಾ ಲೆಪ್ರೈ ಎಂಬ ಸುಕ್ಷ್ಮಾಣುವಿನಿಂದ ಹರಡುತ್ತದೆ. ರೋಗಿಯು ಕೆಮ್ಮಿದಾಗ ಮತ್ತು ಸೀನಿದಾಗ ಗಾಳಿಯಲ್ಲಿ ಸೇರಿಕೊಂಡು ಒಬ್ಬರಿಂದ ಇನ್ನೊಬ್ಬರಿಗೆ ಹರುಡುತ್ತದೆ. ರೋಗದ ಲಕ್ಷಣಗಳು ಚರ್ಮದ ಮೇಲೆ ಯಾವುದೇ ತಿಳಿಬಿಳಿ, ತಾಮ್ರ ಬಣ್ಣದ ಸ್ಪರ್ಶಜ್ಞಾನವಿಲ್ಲದ ಮಚ್ಚೆ, ದಪ್ಪನಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಗಂಟುಗಳು, ಕಣ್ಣಿನ ರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿ ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವಿಕೆ ಅಥವಾ ಮರಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ ಅಥವಾ ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯುವುದು ಹಾಗೂ ಪಾದರಕ್ಷೆಗಳನ್ನು ತೊಡುವಲ್ಲಿ ಬಲಹೀನತೆ ಕಂಡುಬರುವುದು. ಇಂತಹ ಲಕ್ಷಣಗಳು ಯಾರಿಗಾದರು ಕಂಡುಬಂದರೆ ತಕ್ಷಣ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರನ್ನ ಸಂಪರ್ಕಿಸಬೇಕು. ರೋಗ ಕಚಿತಪಟ್ಟರೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಕುಷ್ಠರೋಗ ನಿರ್ಮೂಲನೆಯಲ್ಲಿ ಶಾಲಾ ವಿದ್ಯಾರ್ಥಿಗಳ ಪಾತ್ರ ಹಾಗೂ ವಹಿಸಬೇಕಾದ ಮುಂಜಾಗ್ರತ ಕ್ರಮಗಳ ಕುರಿತು ಮಾತನಾಡಿ, ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶಗಳಲ್ಲಿ ಜಾಗೃತಿ ಮೂಡಿಸಬೇಕು. ಹದಿ-ಹರೆಯದವರ ಆರೋಗ್ಯ ರಕ್ಷಣೆ ಮತ್ತು ಇತರೆ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಅವರು ಮಾತನಾಡಿ, ಕುಷ್ಠರೋಗದ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಿ, ಜಾಗೃತಿ ಮೂಡಿಸೋಣ, ತಪ್ಪು ಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗದಿಂದ ಬಾಧಿತರಾದ ಎಲ್ಲರನ್ನೂ ಹಿಂದುಳಿಯದಂತೆ ನೋಡಿಕೊಳ್ಳೋಣ ಎಂದು ತಿಳಿಸಿದರು. ನಂತರ ಕುಷ್ಠರೋಗ ನಿರ್ಮೂಲನೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಶಾಲೆಯ ಮುಖ್ಯೋ ಪಾಧ್ಯಾಯರಾದ ಅಂದಪ್ಪ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ" ಹಮ್ಮಿಕೊಳ್ಳುವ ಮೂಲಕ ಜಾಗೃತಿ ಮೂಡಿಸುತ್ತಿದೆ. ಈ ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿದೆ. ಜೊತೆಗೆ ವಿವಿದ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗ ಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಮನೆ, ಊರು, ವಾರ್ಡ್‌ಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ದಿನೇಶ್, ಹಿರಿಯ ಮೇಲ್ವಿಚಾರಕ ವೀರಭದ್ರಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಪರಶು ರಾಮ, ಲಿಂಕ್‌ವರ್ಕರ್ ಉದಯ ಸೇರಿದಂತೆ ಸಹಶಿಕ್ಷಕರು, ಆಶಾ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಎಸ್ಸಿ, ಎಸ್ಟಿ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಕೊಪ್ಪಳ ಫೆಬ್ರುವರಿ 02: 2025-26ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿಯಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಕೆಯ ಅವಧಿಯನ್ನು ವಿಸ್ತರಿಸಲಾಗಿದೆ. 2025-26ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿಯಲ್ಲಿ 2024ನೇ ಕ್ಯಾಲೆಂಡರ್ ವರ್ಷದಲ್ಲಿ (01.01.2024 ರಿಂದ 31.12.2024) ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು ಈಗಾಗಲೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿತ್ತು. ಅದರಂತೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ https://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಕೆಯ ಅವಧಿಯನ್ನು ಫೆಬ್ರವರಿ 10ರವರೆಗೆ ವಿಸ್ತರಿಸಲಾಗಿದೆ.

ಅರ್ಜಿ ಸಲ್ಲಿಸಲು ಕ್ರೀಡಾಪಟುಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಪ್ರೋತ್ಸಾಹಧನವನ್ನು ಕರ್ನಾಟಕದ ಕ್ರೀಡಾಪಟುಗಳಿಗೆ ಮಾತ್ರ ನೀಡುವುದು. ಅಂತರರಾಷ್ಟ್ರೀಯ, ರಾಷ್ಟ್ರೀಯ, ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾಗಿರಬೇಕು. ಕ್ರೀಡಾಪಟುಗಳು ಕರ್ನಾಟಕ ಮೂಲದವರಾಗಿದ್ದು, ಬೇರೆ ರಾಜ್ಯ ಅಥವಾ ಕ್ರೀಡಾ ತಂಡವನ್ನು (Services, Airlines, Railways) ಪ್ರತಿನಿಧಿಸುವ ಕ್ರೀಡಾಪಟುಗಳು ಈ ಪುರಸ್ಕಾರಕ್ಕೆ ಅರ್ಹರಾಗಿರುವುದಿಲ್ಲ. ಸರ್ಕಾರಿ ಅಥವಾ ಅರೆ ಸರ್ಕಾರಿ ಇಲಾಖೆಗಳಲ್ಲಿ ನೇಮಕಗೊಂಡು ಸೇವೆ ಸಲ್ಲಿಸುತ್ತಿರುವವರು ಅಂತರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಹಾಗೂ ಪದಕ ಪಡೆದವರು ಮಾತ್ರ ಅರ್ಜಿಯನ್ನು ಸಲ್ಲಿಸಲು ಅರ್ಹರಿರುತ್ತಾರೆ.

ಕ್ರೀಡಾಪಟುಗಳು ಆಧಾರ್‌ಕಾರ್ಡ್, ಪಡಿತರ ಚೀಟಿ ಹಾಗೂ ಆರ್.ಡಿ.ಸಂಖ್ಯೆಯನ್ನು ಒಳಗೊಂಡ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಒಲಂಪಿಕ್, ಏಷ್ಯನ್ ಅಥವಾ ಕಾಮನ್ ವೆಲ್ತ್ ಕ್ರೀಡೆಗಳಲ್ಲಿ ಅಂತರಾಷ್ಟ್ರೀಯ ಸಂಸ್ಥೆ ಮತ್ತು ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದಿಂದ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ನಡೆಸುವ ಅಧಿಕೃತ ಚಾಂಪಿಯನ್‌ಶಿಪ್‌ಗಳಿಗೆ ಮಾತ್ರ ಈ ಪ್ರೋತ್ಸಾಹ ಧನ ನೀಡಲಾಗುವುದು. ಮಾನ್ಯತೆ ಪಡೆಯದೇ ಇರುವ ಯಾವುದೇ ಫೆಡರೇಷನ್ ನಡೆಸುವ ಕ್ರೀಡೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಹರಾಗಿರುವುದಿಲ್ಲ.

6ನೇ ತರಗತಿಯಿಂದ ವ್ಯಾಸಂಗ ಮಾಡುತ್ತಿರುವ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಹಿರಿಯರ(ವಯೋಮಿತಿ ಗುಂಪು) ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಹರಾಗಿರುವುದಿಲ್ಲ. ಬ್ಯಾಂಕ್ ಖಾತೆ ಕಡ್ಡಾಯವಾಗಿ ಕ್ರೀಡಾಪಟುವಿನ ಹೆಸರಿನಲ್ಲಿರಬೇಕು. ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟವನ್ನು (ಹೆಸರು, ಖಾತೆ ಸಂಖ್ಯೆ ಐ.ಎಫ್.ಎಸ್.ಸಿ ಸಂಖ್ಯೆ ಇರುವ ಸಂಪೂರ್ಣ ವಿವರಗಳನ್ನೊಳಗೊಂಡ ಪ್ರತಿ) ಲಗತ್ತಿಸಬೇಕು. ಹಿಂದಿನ ಕ್ಯಾಲೆಂಡರ್ ವರ್ಷದ ಕ್ರೀಡಾ ಸಾಧನೆಯನ್ನು ಮಾತ್ರ ಪರಿಗಣಿಸಿ ಪ್ರಸಕ್ತ ಸಾಲಿನ ಪ್ರೋತ್ಸಾಹ ಧನವನ್ನು ಪಾವತಿಸಲಾಗುವುದು.

ಒಂದು ವರ್ಷದಲ್ಲಿ ಒಂದಕ್ಕಿಂತ ಹೆಚ್ಚಿನ ಯಾವುದೇ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದರೂ ಕೂಡ ಒಂದು ಅತ್ಯುನ್ನತ ಸಾಧನೆ ಅಥವಾ ಪದಕವನ್ನು ಮಾತ್ರ ಪರಿಗಣಿಸಿ ಪ್ರೋತ್ಸಾಹ ಧನವನ್ನು ನೀಡಲಾಗುವುದು ಎಂದು ಕೊಪ್ಪಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಟಗಿ: ಆದರ್ಶ ವಿದ್ಯಾಲಯದ 6ನೇ ತರಗತಿಗೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಕೊಪ್ಪಳ ಫೆಬ್ರುವರಿ 02: ಯಲಬುರ್ಗಾ ತಾಲ್ಲೂಕಿನ ಇಟಗಿ ಗ್ರಾಮದಲ್ಲಿನ ಆದರ್ಶ ವಿದ್ಯಾಲಯ ಶಾಲೆಗೆ 2026-27ನೇ ಸಾಲಿಗೆ 6ನೇ ತರಗತಿಗೆ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಫೆಬ್ರವರಿ 25ರ ವರೆಗೆ ಅವಕಾಶವಿದ್ದು, ಆಸಕ್ತರು ಆನ್‌ಲೈನ್ ಮೂಲಕ ವೆಬ್‌ಸೈಟ್ https://schooleducation.karnataka.gov.in ಮತ್ತು www.vidyavahini.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು. ಪ್ರಸ್ತುತ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಯ ಎಸ್.ಎ.ಟಿ.ಎಸ್ ಸಂಖ್ಯೆ, ವಿದ್ಯಾರ್ಥಿಯ ಇತ್ತೀಚಿನ ಭಾವ ಚಿತ್ರ, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಚಾಲ್ತಿಯಲ್ಲಿರುವ ಪೋಷಕರ ಮೊಬೈಲ್ ಸಂಖ್ಯೆ, 5ನೇ ತರಗತಿ ಅಭ್ಯಾಸ ಮಾಡುತ್ತಿರುವ ಶಾಲೆಯ ಮುಖ್ಯೋಪಾಧ್ಯಾಯರ ಮೊಬೈಲ್ ಸಂಖ್ಯೆ. ಬೇರೆ ತಾಲೂಕು, ಜಿಲ್ಲೆ, ರಾಜ್ಯಗಳ ಮಕ್ಕಳು ಕಡ್ಡಾಯವಾಗಿ ವ್ಯಾಸಾಂಗ ಪ್ರಮಾಣ ಪತ್ರದ ಸಂಖ್ಯೆಯನ್ನು ಅರ್ಜಿಯೊಂದಿಗೆ (ವಿದ್ಯಾರ್ಥಿಯುವ ಆಯ್ಕೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ) ಸಲ್ಲಿಸಬೇಕು. ಅಂಗವಿಕಲ ವಿದ್ಯಾರ್ಥಿಗಳಿಗೆ ಸಕ್ಷಮ ಪ್ರಾಧಿಕಾರದಿಂದ ನೀಡಿರುವ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮಾಹಿತಿಗಾಗಿ ಮುಖ್ಯೋಪಾಧ್ಯಾಯರು, ಆದರ್ಶ ವಿದ್ಯಾಲಯ, ಇಟಗಿ, ತಾ. ಯಲಬುರ್ಗಾ ಜಿ: ಕೊಪ್ಪಳ ಇವರ ಮೊ. 9945420957 ಹಾಗೂ 8494858187 ಇವರನ್ನು ಶಾಲಾ ಅವಧಿಯಲ್ಲಿ ಸಂಪರ್ಕಿಸಬಹುದು. ಯಲಬುರ್ಗಾ ತಾಲೂಕಿನ ಎಲ್ಲಾ ಪ್ರಾಥಮಿಕ ಶಾಲೆಗಳ ಮುಖ್ಯೋಪಾಧ್ಯಾಯರು ಪ್ರಸ್ತುತ ವರ್ಷ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಪಾಲಕರಿಗೆ ಇದರ ಮಾಹಿತಿ ತಿಳಿಸುವಂತೆ ಇಟಗಿ ಆದರ್ಶ ವಿದ್ಯಾಲಯದ ಮುಖ್ಯೋಪಾಧ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಶವದ ವಾರಸುದಾರರ ಪತ್ತೆಗೆ ಮನವಿ

ಕೊಪ್ಪಳ ಫೆಬ್ರುವರಿ 02: ಗದಗ ರೈಲ್ವೇ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇದೇ ಫೆಬ್ರವರಿ 1 ರಂದು ಬಿಂಕದಕಟ್ಟಿ-ಗದಗ ರೈಲ್ವೆ ನಿಲ್ದಾಣಗಳ ಮಧ್ಯ ಸುಮಾರು 55 ರಿಂದ 60 ವರ್ಷದ ಒಬ್ಬ ಅಪರಿಚಿತ ವ್ಯಕ್ತಿಯು ಯಾವುದೋ ರೈಲುಗಾಡಿಗೆ ಸಿಕ್ಕು ಬಿದ್ದು ಮೃತಪಟ್ಟಿದ್ದು, ಈ ಸಂಬಂಧ ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂಬರ 04/2026 ಕಲಂ 194 ಬಿ.ಎನ್.ಎಸ್.ಎಸ್ ನೇದ್ದರ ರೀತ್ಯ ಪ್ರಕರಣ ದಾಖಲಾಗಿದೆ.

ಮೃತನ ವ್ಯಕ್ತಿಯ ಚಹರೆ: ಮೃತ ವ್ಯಕ್ತಿಯು ದುಂಡನೆಯ ಮುಖ, ಅಗಲವಾದ ಹಣೆ ಮತ್ತು ನೀಟಾದ ಮೂಗು, ಸಾದಾಗಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು, ಏರು ಹಣೆ, ಸುಮಾರು 5.4 ಅಡಿ ಎತ್ತರವಿದ್ದು, ತಲೆಯಲ್ಲಿ ಸುಮಾರು 2-3 ಇಂಚು ಕಪ್ಪು-ಬಿಳಿ ಕೂದಲು, ಬಿಳಿ ಮೀಸೆ ಬಿಟ್ಟಿರುತ್ತಾರೆ. ಮೃತನ ಮೈಮೇಲೆ ಒಂದು ತಿಳಿ ನೀಲಿ ಬಣ್ಣದ ಫುಲ್ ಶರ್ಟ್, ಒಂದು ಕಂದು ಬಣ್ಣದ ಆಫ್ ಬನಿಯನ್, ಒಂದು ಕಪ್ಪು ಕಲರಿನ ಅಂಡರ್‌ವೇರ್, ಒಂದು ಕಪ್ಪು ಕಲರಿನ ಪ್ಯಾಂಟ್ ಧರಿಸಿರುತ್ತಾನೆ.

ಈ ಮೃತ ವ್ಯಕ್ತಿಯ ವಾರಸುದಾರರಿದ್ದಲ್ಲಿ, ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಗದಗ ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08372-278744 ಅಥವಾ ಮೊ.ನಂ. 9480802128 ಇ-ಮೇಲ್: gadagrly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ 080- 22871291 ನೇದ್ದಕ್ಕೆ ಮಾಹಿತಿ ನೀಡುವಂತೆ ಗದಗ ರೈಲ್ವೇ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ಮಹಿಳೆಯ ಪತ್ತೆಗೆ ಮನವಿ

ಯಾದಗಿರಿ : ಫೆಬ್ರವರಿ 02, : ಯಾದಗಿರಿ ನಗರದ ಖಾಜಗಾರವಾಡಿ 24 ವರ್ಷದ ಕುಮಾರಿ ಸಂಜನಾ ಮಹಿಳೆ 2026ರ ಜನವರಿ 29 ರಂದು



ಕಾಣೆಯಾದ ಹಿನ್ನೆಲೆ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿದಿದೆ ಎಂದು ಯಾದಗಿರಿ ನಗರ ಪೊಲೀಸ್ ಠಾಣೆ ಆರಕ್ಷಕ ಉಪ ನಿರೀಕ್ಷಕರು (ಕಾ.ಸು) ಮಂಜನಗೌಡ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಯಾದಗಿರಿ ನಗರದ ಖಾಜಗಾರವಾಡಿದಿಂದ ಈಕೆ ಕಳೆದ ಜ.29 ರಂದು ಮಧ್ಯಾಹ್ನ 2 ಗಂಟೆಗೆ ಸುಮಾರಿಗೆ ಹೊರಗಡೆ ಹೋದವಳು ರಾತ್ರಿಯಾದರೂ ಮರಳಿ ಮನೆಗೆ ಬರದೇ ಕಾಣೆಯಾಗಿದ್ದು, ಈ ರಾತ್ರಿಯಾದರೂ ಮನೆಗೆ ಬಾರದೆ ಇದ್ದ ಹಿನ್ನೆಲೆ ನಂಬರ್ ಕರೆ ಮಾಡಿ ಸಂಪರ್ಕಿಸಲು ಪ್ರಯತ್ನಿಸಿದ್ದು ಸಂಪರ್ಕಕ್ಕೆ ಬಂದಿರುವುದಿಲ್ಲ, ಗಾಬರಿಗೊಂಡು ನಾನು ಮತ್ತು ನನ್ನ ಮಡದಿ ಎಲ್ಲರೂ ಕೂಡಿಕೊಂಡು ನಮ್ಮ ಸಂಬಂಧಿಕರ ಮನೆಗಳಿಗೆ ಕರೆ ಮಾಡಿ ಹೋಗಿ ಹುಡುಕಾಡಿದ್ದು, ಅವಳ ಇರುವಿಕೆ ಬಗ್ಗೆ ತಿಳಿದುಬಂದಿರುವುದಿಲ್ಲ.

ಕಾಣೆಯಾದ ಮಹಿಳೆಯ ಚಹರಾ ಪಟ್ಟಿ ವಿವರ : ಮಹಿಳೆಯ ಕೂದಲು ಕಪ್ಪು, ಮೈಬಣ್ಣ ಗೋಧಿ ಕೆಂಪುಬಣ್ಣ 5 ಫೀಟ್ 3 ಇಂಚು ಎತ್ತರ ಇದ್ದು, ದುಂಡನೆ ಮುಖ, ಸಾಧಾರಣ ಮೈಕಟ್ಟು, ಹಳದಿ ಬಣ್ಣದ ಚುಡಿದಾರ, ಬಿಳಿ ಬಣ್ಣದ ಲಗೀನ್ಸ್ ಪ್ಯಾಂಟ್ ಧರಿಸಿದ್ದಾಳೆ. ಕನ್ನಡ, ಮರಾಠಿ ಮಾತನಾಡುತ್ತಾಳೆ. ಮಹಿಳೆ ಪತ್ತೆಯಾದಲ್ಲಿ ಯಾದಗಿರಿ ನಗರ ಪೊಲೀಸ್ ಠಾಣೆ ಠಾಣಾಧಿಕಾರಿ ಮೊ.ನಂ.7411275228 ಅಥವಾ 9845728951ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ : ಅರ್ಜಿ ಅವಧಿ ವಿಸ್ತರಣೆ

ಬಾಗಲಕೋಟೆ : ಜನೇವರಿ 31 : ಮೆಟ್ರಿಕ್ ನಂತರದ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 15 ವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾ ಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸತ್ಯ ಹೊರಬಂದರೆ ಮೋದಿ, ರಾಜನಾಥ್ ಸಿಂಗ್ ಮುಖವಾಡ ಬಯಲು: ರಾಹುಲ್

(ಮುಖಪುಟದಿಂದ)

ಅವರು ಹೇಳಬಯಸುವ ಸತ್ಯದ ಬಗ್ಗೆ ಭಯವೇಕೆ? ಈ ಪುಸ್ತಕದಿಂದ ನಾವು ಪ್ರಧಾನಮಂತ್ರಿಯವರ ಬಗ್ಗೆ ಮತ್ತು ರಾಜನಾಥ್ ಸಿಂಗ್ ಅವರ ಬಗ್ಗೆ ಮಾತ್ರವಲ್ಲದೆ, ದೇಶದ ರಾಜಕೀಯ ನಾಯಕತ್ವವು ಭಾರತೀಯ ಸೇನೆಯನ್ನು ಹೇಗೆ ಸಂಕಷ್ಟಕ್ಕೆ ದೂಡಿತು ಎಂಬ ಬಗ್ಗೆಯೂ ಬಹಳಷ್ಟು ಕಲಿಯಲಿದ್ದೇವೆ" ಎಂದರು.

"ನರವಾಣೆಯವರು ತಮ್ಮ ಪುಸ್ತಕದಲ್ಲಿ ಪ್ರಧಾನಮಂತ್ರಿ ಮತ್ತು ರಾಜನಾಥ್ ಸಿಂಗ್ ಅವರ ಬಗ್ಗೆ ಸ್ಪಷ್ಟವಾಗಿ ಬರೆದಿದ್ದಾರೆ. ಈ ವಿಷಯವು ಈಗಾಗಲೇ ಲೇಖನವೊಂದರಲ್ಲಿ ಪ್ರಕಟವಾಗಿದ್ದು, ನಾನು ಆ ಲೇಖನವನ್ನು ಉಲ್ಲೇಖಿಸುತ್ತಿದ್ದೇನೆ.

ಆದರೆ, ಅವರು ನನ್ನನ್ನು ಮಾತನಾಡಲು ಬಿಡುತ್ತಿಲ್ಲ ಒಂದು ವೇಳೆ ಈ ಸತ್ಯ ಹೊರಬಂದರೆ, ನರೇಂದ್ರ ಮೋದಿ ಮತ್ತು ರಾಜನಾಥ್ ಸಿಂಗ್ ಅವರ ಅಸಲಿ ಮುಖವಾಡ ಜನರಿಗೆ ತಿಳಿಯುತ್ತದೆ ಎಂಬ ಭಯ ಅವರಿಗಿದೆ. ಚೀನಾ ನಮ್ಮ ಎದುರು ನಿಂತು ಮುನ್ನುಗ್ಗುತ್ತಿದ್ದಾಗ, ಆ '56 ಇಂಚಿನ ಎದೆ'ಗೆ ಏನಾಗಿತ್ತು ಎಂಬುದು ಆಗ ಬಯಲಾಗುತ್ತದೆ"

ಪ್ರಧಾನಿ, ಗೃಹ ಸಚಿವರು ಮತ್ತು ರಕ್ಷಣಾ ಸಚಿವರು ರಾಷ್ಟ್ರೀಯ ಭದ್ರತೆಯ ವಿಷಯದ ಬಗ್ಗೆ ಮಾತನಾಡಲು ಮುಜುಗರ ಅನುಭವಿಸುತ್ತಿರುವುದರಿಂದ, ಅವರು ನನಗೆ ಮಾತನಾಡಲು ಅವಕಾಶ ನೀಡುತ್ತಿಲ್ಲ ಎಂದು ರಾಹುಲ್ ಗಾಂಧಿ ಹೇಳಿದ್ದು, ಕಲಾಪ ಪುನರಾರಂಭವಾದಾಗ ಮತ್ತೆ ಈ ಬಗ್ಗೆ ಮಾತನಾಡುತ್ತೀರಾ? ಎಂಬ ಮಾಧ್ಯಮದವರ ಪ್ರಶ್ನೆಗೆ "ಹೌದು, ನಾನು ಮಾತನಾಡಲು ಪ್ರಯತ್ನಿಸುತ್ತೇನೆ" ಎಂದು ಉತ್ತರಿಸಿದ್ದಾರೆ.

## ಉತ್ತರಾಖಂಡ। ಹಿಂದುತ್ವ ಗುಂಪಿನ ಕಿರುಕುಳದಿಂದ ಮುಸ್ಲಿಂ ಅಂಗಡಿ ಮಾಲೀಕನನ್ನು ರಕ್ಷಿಸಿದ ದೀಪಕ್ ಕುಮಾರ್


ಸ್ಥಳೀಯ ಮುಸ್ಲಿಂ ಅಂಗಡಿ ಮಾಲೀಕನ ವಿರುದ್ಧ ಬಜರಂಗದಳ ಸದಸ್ಯರು ನೀಡುತ್ತಿದ್ದ ಕಿರುಕುಳವನ್ನು ಜಿಮ್ ಮಾಲೀಕ ದೀಪಕ್ ಕುಮಾರ್ ಸ್ಥಳದಲ್ಲೇ ಎದುರಿಸಿದ್ದಾರೆ. ಆಕ್ರೋಶಿತರಾದ ಹಿಂದುತ್ವ ಗುಂಪಿನ ಸದಸ್ಯರು ದೀಪಕ್ ವಿರುದ್ಧವೇ ಪ್ರತಿಭಟನೆ ನಡೆಸಿದ್ದು, ಹಲವಾರ ವಿರುದ್ಧ ಉತ್ತರಾಖಂಡ ಪೊಲೀಸರು ಎಆರ್ ದಾಖಲಿಸಿದ್ದಾರೆ.

ತನ್ನ ಅಂಗಡಿಯ ಹೆಸರಿನ ಬಗ್ಗೆ ಕಿರುಕುಳ ಅನುಭವಿಸಿದ ಮುಸ್ಲಿಂ ಅಂಗಡಿಯ ಮಾಲೀಕ ವಕೀಲ್ ಅಹ್ಮದ್ ಅವರನ್ನು ರಕ್ಷಿಸಲು ದಿಲೀಪ್ ಕುಮಾರ್ ಮಧ್ಯಪ್ರವೇಶಿಸಿದ ನಂತರ ಪ್ರತಿಭಟನೆ ಭುಗಿಲೆದ್ದಿದೆ.

ಜನವರಿ 26 ರಂದು ಬಜರಂಗದಳಕ್ಕೆ ಸೇರಿದವರು ಎನ್ನಲಾದ ಹಿಮದುತ್ವ ಗುಂಪೊಂದು "ಬಾಬಾ ಸ್ಕೂಲ್ ಡ್ರೆಸ್" ಅಂಗಡಿಯ ಮಾಲೀಕ ಅಹ್ಮದ್ ಅವರನ್ನು ಅಂಗಡಿ ಹೆಸರಿನಿಂದ ಬಾಬಾ ಎಂಬ ಪದವನ್ನು ತೆಗೆದುಹಾಕುವಂತೆ ಒತ್ತಾಯಿಸಿದಾಗ ಆರಂಭಿಕ ವಿವಾದ ಪ್ರಾರಂಭವಾಯಿತು. ಬಾಬಾ ಎಂಬ ಪದವನ್ನು ಹಿಂದೂ ಧಾರ್ಮಿಕ ವ್ಯಕ್ತಿಗಳಿಗೆ ಮಾತ್ರ ಬಳಸಬೇಕೆಂದು ಪುರುಷರು ಹೇಳಿಕೊಂಡರು. ಕೋಟ್ವಾರದಲ್ಲಿ ಜಿಮ್ ನಡೆಸುತ್ತಿರುವ ದೀಪಕ್ ಕುಮಾರ್ ಮಧ್ಯಪ್ರವೇಶಿಸಿ ಗುಂಪನ್ನು ಎದುರಿಸಿದರು. ಘಟನೆಯ ವೀಡಿಯೊದಲ್ಲಿ, ಕುಮಾರ್ ತನ್ನನ್ನು ಮೊಹಮ್ಮದ್ ದೀಪಕ್ ಎಂದು ಗುರುತಿಸಿಕೊಳ್ಳುತ್ತಾನೆ. ತಾನು ಭಾರತೀಯನೆಂದು ಹೇಳಿದ ಅವರು, ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂದು ತಿಳಿಸಲು ಉದ್ದೇಶಿಸಿದ್ದೇನೆ ಎಂದು ಹೇಳುತ್ತಾನೆ.

ಘರ್ಷಣೆಯ ನಂತರ, ಜನವರಿ 31 ರಂದು ದಿಲೀಪ್ ಕುಮಾರ್ ಅವರ ಜಿಮ್ ಬಳಿ ಸುಮಾರು 40 ಜನರ ಗುಂಪೊಂದು ಜಮಾಯಿಸಿ, ಘೋಷಣೆಗಳನ್ನು ಕೂಗುತ್ತಾ, ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರವನ್ನು ತಡೆದು, ಪೊಲೀಸ್ ಸಿಬ್ಬಂದಿಯನ್ನು ಬೆದರಿಸಿದರು ಎಂದು ವರದಿಯಾಗಿದೆ. ನಂತರ ಪ್ರತಿಭಟನಾಕಾರರು ಬಾಬಾ ಡ್ರೆಸ್ ಅಂಗಡಿಯ ಕಡೆಗೆ ತೆರಳಿ, ಅವಾಚ್ಯ ಶಬ್ದಗಳಿಂದ ಕೂಗುತ್ತಾ ಕೋಮು ಉದ್ವಿಗ್ನತೆಯನ್ನು ಸೃಷ್ಟಿಸಿದರು. ಗುಂಪನ್ನು ಚದುರಿಸಲು ಮತ್ತು ಮತ್ತಷ್ಟು ಉದ್ವಿಗ್ನತೆಯನ್ನು ತಡೆಯಲು ಪೊಲೀಸರನ್ನು ನಿಯೋಜಿಸಲಾಯಿತು. ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಮೂರು ಪ್ರತ್ಯೇಕ ಎಫ್ ಐಆರ್‌ಗಳನ್ನು ದಾಖಲಿಸಿದ್ದಾರೆ.

ಸಂಚಾರಕ್ಕೆ ಅಡ್ಡಿಪಡಿಸುವುದು, ಕೋಮು ಸಾಮ ರಸ್ಯವನ್ನು ಭಂಗಗೊಳಿಸುವುದು ಮತ್ತು ಪೊಲೀಸರ ಮೇಲೆ ಹಲ್ಲೆ ನಡೆಸಿದ್ದಕ್ಕಾಗಿ 30 ರಿಂದ 40 ಅಪರಿಚಿತ ವ್ಯಕ್ತಿಗಳನ್ನು ಗುರಿಯಾಗಿಸಿಕೊಂಡಿದ್ದಾರೆ. ವಕೀಲ್ ಅಹ್ಮದ್ ಅವರ ದೂರಿನ ಆಧಾರದ ಮೇಲೆ ಎರಡನೇ ಎಫ್‌ಐಆರ್ ದಾಖಲಿಸಲಾಗಿದೆ.



ಜನವರಿ 28 ರಂದು ನಡೆದ ಘರ್ಷಣೆಯ ಸಂದರ್ಭದಲ್ಲಿ ಅವಹೇಳನಕಾರಿ ಭಾಷೆ ಬಳಸಿ ಬೆದರಿಕೆ ಹಾಕಿದ ಆರೋಪದ ಮೇಲೆ ದೀಪಕ್ ಕುಮಾರ್ ಮತ್ತು ಅವರ ಸಹಚರರ ವಿರುದ್ಧ ಮತ್ತೊಬ್ಬ ಸ್ಥಳೀಯ ನಿವಾಸಿ ಕಮಲ್ ಪ್ರಸಾದ್ ಅವರು ಮೂರನೇ ಎಫ್‌ಐಆರ್ ದಾಖಲಿಸಿದ್ದಾರೆ.

ಪೌರಿ ಗರ್ವಾಲ್ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಸರ್ವೇಶ್ ಪನ್ವಾರ್ ಅವರು ತನಿಖೆ ನಡೆಯುತ್ತಿದೆ ಎಂದು ಹೇಳಿದರು. ಗಲಾಟೆಯಲ್ಲಿ ಭಾಗವಹಿಸುವವರನ್ನು ಗುರುತಿಸಲು ಅಧಿಕಾರಿಗಳು ವೀಡಿಯೊ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದು, ಭದ್ರತೆ ಕಾಪಾಡಿಕೊಳ್ಳಲು ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿದ್ದಾರೆ. ಕೋಮು ಸಾಮರಸ್ಯವನ್ನು ಕಾಪಾಡಿಕೊಂಡು ಹೆಚ್ಚಿನ ಸಂಘರ್ಷವನ್ನು ತಪ್ಪಿಸಬೇಕು ಎಂದು ಪನ್ವರ್ ನಿವಾಸಿಗಳಿಗೆ ಪೊಲೀಸರು ಮನವಿ ಮಾಡಿದ್ದಾರೆ. ದೀಪಕ್ ಕುಮಾರ್ ತಮ್ಮ ನಿಲುವಿನಿಂದಾಗಿ ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕ ಗಮನ ಸೆಳೆದಿದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿನ ವೀಡಿ ಯೊವೊಂದರಲ್ಲಿ ಅವರು, "ನಾನು ಮೊದಲು ಮತ್ತು ಮುಖ್ಯವಾಗಿ ಮನುಷ್ಯ. ನಮ್ಮ ದೇಶಕ್ಕೆ ಪ್ರೀತಿ ಮತ್ತು ವಾತ್ಸಲ್ಯ ಬೇಕು, ದ್ವೇಷವಲ್ಲ. ಪ್ರೀತಿಯನ್ನು ಹರಡುವುದು ಬಹಳ ದೊಡ್ಡ ವಿಷಯ" ಎಂದು ಹೇಳಿದ್ದಾರೆ.

ಬೆದರಿಕೆಗಳು ಮತ್ತು ಆನ್‌ಲೈನ್ ನಿಂದನೆಯ ಹೊರತಾಗಿಯೂ, ತನ್ನ ನಿಲುವಿನಿಂದ ಹಿಂದೆ ಸರಿಯುವುದಿಲ್ಲ ಎಂದು ಅವರು ಹೇಳಿದ್ದಾರೆ.

ದೀಪಕ್ ಸಂವಿಧಾನ, ಮಾನವೀಯತೆಗಾಗಿ ಹೋರಾಡುವ ವೀರ: ರಾಹುಲ್ ಗಾಂಧಿ

ಲೋಕಸಭೆಯ ವಿರೋಧ ಪಕ್ಷದ ನಾಯಕ, ಉತ್ತರಾಖಂಡದ ದೀಪಕ್ ಸಂವಿಧಾನ ಮತ್ತು ಮಾನವೀಯತೆಗಾಗಿ ಹೋರಾಡುತ್ತಿರುವುದರಿಂದ ಅವರು ಭಾರತದ ವೀರ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದರು.

ಆಡಳಿತಾರೂಢ ಭಾರತೀಯ ಜನತಾ ಪಕ್ಷ (ಬಿಜೆಪಿ) ಮತ್ತು ಸಂಘ ಪರಿವಾರವು ಸಂವಿಧಾನವನ್ನು ತುಳಿಯಲು ಪ್ರತಿದಿನ ಪಿತೂರಿ ನಡೆಸುತ್ತಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದರು.

"ಅವರು ದ್ವೇಷದ ಮಾರುಕಟ್ಟೆಯಲ್ಲಿ 'ಮೊಹಬ್ಬತ್ ಕಿ ದುಕಾನ್' ನ ಜೀವಂತ ಸಂಕೇತ ಮತ್ತು ಅದು ಅಧಿಕಾರದಲ್ಲಿರುವವರನ್ನು ಹೆಚ್ಚು ಚುಚ್ಚುತ್ತದೆ" ಎಂದು ರಾಹುಲ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

"ಸಂಘ ಪರಿವಾರವು ಉದ್ದೇಶಪೂರ್ವಕವಾಗಿ ದೇಶದ ಆರ್ಥಿಕತೆ ಮತ್ತು ಸಮಾಜವನ್ನು ವಿಷಪೂರಿತಗೊಳಿಸುತ್ತಿದೆ, ಇದರಿಂದಾಗಿ ಭಾರತವು ವಿಭಜನೆಯಾಗಿ ಉಳಿದಿದೆ. ಕೆಲವು ಜನರು ಭಯದ ಊರುಗೋಲಿನ ಮೇಲೆ ಆಳ್ವಿಕೆ ನಡೆಸುತ್ತಿದ್ದಾರೆ. ಉತ್ತರಾಖಂಡದ ಬಿಜೆಪಿ ಸರ್ಕಾರವು ಸಾಮಾನ್ಯ ನಾಗರಿಕರನ್ನು ಬೆದರಿಸುವ ಮತ್ತು ಕಿರುಕುಳ ನೀಡುವಲ್ಲಿ ತೊಡಗಿರುವ ಆ ಸಮಾಜವಿರೋಧಿ ಶಕ್ತಿಗಳ ಜೊತೆ ಬಹಿರಂಗವಾಗಿ ನಿಂತಿದೆ" ಎಂದು ಅವರು ಆರೋಪಿಸಿದರು.

ದ್ವೇಷ, ಭಯ ಮತ್ತು ಅರಾಜಕತೆಯ ವಾತಾವರಣದಲ್ಲಿ ಯಾವುದೇ ದೇಶ ಮುಂದುವರಿಯಲು ಸಾಧ್ಯವಿಲ್ಲ, ಶಾಂತಿ ಇಲ್ಲದೆ ಅಭಿವೃದ್ಧಿ ಕೇವಲ ಖಾಲಿ ಘೋಷಣೆಯಾಗಿದೆ ಎಂದು ಗಾಂಧಿ ಹೇಳಿದರು.

"ನಮಗೆ ದೀಪಕ್‌ನಂತಹ ಹೆಚ್ಚಿನ ಜನರು ಬೇಕು, ತಲೆಬಾಗದವರು, ಭಯಪಡದವರು ಮತ್ತು ಸಂವಿಧಾನದೊಂದಿಗೆ ತಮ್ಮ ಎಲ್ಲಾ ಶಕ್ತಿಯಿಂದ ದೃಢವಾಗಿ ನಿಲ್ಲುವವರು. ನಾವು ನಿಮ್ಮೊಂದಿಗಿದ್ದೇವೆ ಸಹೋದರ. ಭಯಪಡಬೇಡಿ. ನೀವು ಸಿಂಹ ಹೃದಯದ ಯೋಧ" ಎಂದು ರಾಹುಲ್ ಗಾಂಧಿ ಅವರು ದೀಪಕ್ ಅವರ ಛಾಯಾಚಿತ್ರವನ್ನು ತಮ್ಮ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

## 'ತೆರೆಮರೆಯಲ್ಲಿ ಏನೋ ಅನುಮಾನಾಸ್ಪದ ಘಟನೆ ನಡೆದಿದೆ..'; ಅಜಿತ್ ವಿಮಾನ ಅಪಘಾತದ ಕುರಿತು ಅನುಮಾನ ವ್ಯಕ್ತಪಡಿಸಿದ ರಾವತ್



ಜನವರಿ 28, 2026 ರಂದು ಮಹಾರಾಷ್ಟ್ರದ ಬಾರಾಮತಿ ಬಳಿ ನಡೆದ ವಿಮಾನ ಅಪಘಾತದಲ್ಲಿ ಉಪಮುಖ್ಯಮಂತ್ರಿ ಮತ್ತು ಎನ್‌ಸಿಪಿ ನಾಯಕ ಅಜಿತ್ ಪವಾರ್ ಅವರ ಹಠಾತ್ ಸಾವು ಸಾಕಷ್ಟು ಅನುಮಾನಗಳನ್ನು ಹುಟ್ಟುಹಾಕಿದೆ. ರಾಜಕೀಯ ವಲಯದಿಂದ ಸಂಪೂರ್ಣ ತನಿಖೆಗೆ ಒತ್ತಾಯ ಕೇಳಿಬಂದಿದೆ. ಗ್ಲೋಬಲ್ ಏರ್ ಎಲ್‌ಜೆ45 ವಿಮಾನ ಇಳಿಯಲು ಪ್ರಯತ್ನಿಸುವಾಗ ಅಪಘಾತಕ್ಕೀಡಾಗಿ 66 ವರ್ಷದ ಪವಾರ್ ತಮ್ಮ ಅಂಗರಕ್ಷಕ, ಇಬ್ಬರು ಪೈಲಟ್‌ಗಳು ಮತ್ತು ಒಬ್ಬ ವಿಮಾನ ಸಿಬ್ಬಂದಿಯೊಂದಿಗೆ ಸಾವನ್ನಪ್ಪಿದರು. ಆರಂಭಿಕ ವರದಿಗಳು ವಿಮಾನದಲ್ಲಿ ಆರು ಜನರಿದ್ದರು ಎಂದು ಸೂಚಿಸಿದ್ದು, ಕಾಣೆಯಾದ ಶವದ ಬಗ್ಗೆ ಪ್ರಶ್ನೆಗಳನ್ನು ಎತ್ತಿದೆ. ಶಿವಸೇನೆ (ಯುಬಿಟಿ) ರಾಜ್ಯಸಭಾ ಸಂಸದ ಸಂಜಯ್ ರಾವತ್ ಅಪಘಾತದ ಬಗ್ಗೆ ಗಂಭೀರ ಅನುಮಾನಗಳನ್ನು ವ್ಯಕ್ತಪಡಿಸುತ್ತಾ, "ಅಜಿತ್ ಪವಾರ್ ಅವರ ಅಪಘಾತದ ಬಗ್ಗೆ ಪ್ರಶ್ನೆಗಳನ್ನು ಎತ್ತಬೇಕು. ಈ ಪ್ರಶ್ನೆಗಳನ್ನು ಅವರ ಸ್ವಂತ ಪಕ್ಷದೊಳಗೆ ಎತ್ತಲಾಗುತ್ತಿದೆ. ಇದರ ಬಗ್ಗೆ ಏನೋ ಅನುಮಾನಾಸ್ಪದವಾಗಿದೆ. ತೆರೆಮರೆಯಲ್ಲಿ ಏನೋ ನಡೆದಿರಬೇಕು" ಎಂದು ಹೇಳಿದ್ದಾರೆ. ನೀರಾವರಿ ಯೋ ಜನೆಗಳ ಕಡತಗಳ ಕುರಿತು ಬಿಜೆಪಿ ತನಗೆ ಬೆದರಿಕೆ ಹಾಕುತ್ತಿದೆ ಎಂಬ ಕಳವಳ ವ್ಯಕ್ತಪಡಿಸಿದ ನಂತರ ಪವಾರ್ ಶರದ್ ಪವಾರ್ ಜೊತೆಗೆ ಮರ ಳಲು ಯೋಜಿಸಿದ್ದರು ಎಂದು ರಾವತ್ ಆರೋಪಿಸಿದ್ದಾರೆ.

"ಅಜಿತ್ ದಾದಾ ಅವರು 'ಮನೆಗೆ ಮರಳಲು' ಬಯಸಿದ್ದರು ಎಂದು ಹೇಳಿದ್ದರು, ನಂತರ ಬಿಜೆಪಿಯ ಜನರು ಸಿಂಚನ್ ಹಗರಣದ ಕಡತಗಳನ್ನು ನೀಡಿ ಅವರನ್ನು ಬೆದರಿಸಿದರು. ಅವರು ಅದೇ ಕಡತಗಳ ಕುರಿತು ಪ್ರತಿಕ್ರಿಯಿಸಿ ಹತ್ತು ದಿನಗಳಲ್ಲಿ ನಿಗೂಢವಾಗಿ ನಿಧನರಾದರು. ಇದರಿಂದ ನಮಗೆ ಏನು ಅರ್ಥವಾಗಬೇಕು? ಇದು ನ್ಯಾಯಮೂರ್ತಿ ಲೋಯಾ ಅವರನ್ನು ನೆನಪಿಸುತ್ತದೆ. ಇಲ್ಲಿ ಯಾರಾದರೂ ಏನಾದರೂ ಮಾಡಿದ್ದಾರೆಯೇ" ಎಂದು ಅವರು ಪ್ರಶ್ನಿಸಿದ್ದಾರೆ. ಎನ್‌ಸಿಪಿಯೊಳಗಿನ ರಾಜಕೀಯ ಬೆಳವಣಿಗೆಗಳ ಸಮಯವನ್ನು ಸಹ ರಾವತ್ ಪ್ರಶ್ನಿಸಿದರು. "ಪವಾರ್ ಅವರ ಸಾವು ಅಧಿಕಾರದ ತ್ವರಿತ ಪುನರ್‌ರಚನೆಗೆ ಅವಕಾಶ ಮಾಡಿಕೊಟ್ಟಿದೆ. ಮಹಾರಾಷ್ಟ್ರ ರಾಜಕೀಯದಲ್ಲಿ ಮರಾಠಾ ಗುರುತನ್ನು ದುರ್ಬಲಗೊಳಿಸುತ್ತಿದೆ. ಎನ್‌ಸಿಪಿ ನಿಜವಾದ ಮರಾಠಾ ಮತ್ತು ಮರಾಠಿ ಜನರ ಪಕ್ಷವಾಗಿದೆ. ಆ ಗುರುತನ್ನು ಬಿಜೆಪಿ ಬಲವಂತವಾಗಿ ಕಸಿದುಕೊಂಡಿದೆ. ಪವಾರ್ ಮತ್ತು ಪಾಟೀಲ್‌ನಂತಹ ಮಹಾರಾಷ್ಟ್ರ ರಾಜಕೀಯಕ್ಕೆ ಸಂಬಂಧಿಸಿದ ಉಪನಾಮಗಳನ್ನು ಗೋಯಲ್, ಪಟೇಲ್ ಮತ್ತು ಷಾ ಬದಲಾಯಿಸುತ್ತಿದ್ದಾರೆ. ಇದು ರಾಜಕೀಯ ತಂತ್ರವಾಗಿದೆ" ಎಂದು ಹೇಳಿದರು. ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್ ಮತ್ತು ಎನ್‌ಸಿಪಿ-ಎಸ್‌ಸಿಪಿ ನಾಯಕ ಅನಿಲ್ ದೇಶಮುಖ್ ಅವರು ತನಿಖೆಗೆ ಕರೆ ನೀಡಿದ್ದಾರೆ. "ಸಂಪೂರ್ಣ ತನಿಖೆ ನಡೆಯಬೇಕು, ಸತ್ಯವು ಆದಷ್ಟು ಬೇಗ ಹೊರಬರಬೇಕು" ಎಂದು ದೇಶಮುಖ್ ಹೇಳಿದರು. ಅಪಘಾತಕ್ಕೆ ಕಳಪೆ ಗೋಚರತೆಯೇ ಕಾರಣ ಎಂಬ ಅಧಿಕೃತ ಹೇಳಿಕೆಯ ಬಗ್ಗೆಯೂ ಅವರು ಅನುಮಾನಗಳನ್ನು ವ್ಯಕ್ತಪಡಿಸಿದರು, "ವಿಮಾನವು ಹಾರುತ್ತಿರುವುದು ಮತ್ತು ಲ್ಯಾಂಡಿಂಗ್ ಸಮಯದಲ್ಲಿ ಓರೆಯಾ ಗುತ್ತಿರುವುದು ವೀಡಿಯೊಗಳಲ್ಲಿ ಸ್ಪಷ್ಟವಾಗಿ ಗೋಚರಿಸುತ್ತಿದೆ.

ಗೋಚ ರತೆಯನ್ನು ಕಾರಣವೆಂದು ಉಲ್ಲೇಖಿಸಿರುವ ಬಗ್ಗೆ ಜನರು ಅನುಮಾನ ವ್ಯಕ್ತಪಡಿಸಿದ್ದಾರೆ.

ಬ್ಲಾಕ್ ಬಾಕ್ಸ್ ಪತ್ತೆಹಚ್ಚಲಾಗಿದೆ, ಪರೀಕ್ಷೆಯ ನಂತರ ಎಲ್ಲವೂ ಸ್ಪಷ್ಟವಾಗುತ್ತದೆ" ಎಂದು ಹೇಳಿದರು. ಉಜ್ವಲ್ ನಿಕಮ್ ಸೇರಿದಂತೆ ಬಿಜೆಪಿ ನಾಯಕರು ಆರೋಪಗಳನ್ನು ತಳ್ಳಿಹಾಕಿದರು. ಆರೋಪಗಳನ್ನು ಆಧಾರರಹಿತ ಮತ್ತು ರಾಜಕೀಯ ಪ್ರೇರಿತ ಎಂದು ಕರೆದರು. "ಮೃತ ಆತ್ಮದ ಮೇಲೆ ರಾಜಕೀಯ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ. ಇದು ಅಪಘಾತ ಎಂದು ನಮಗೆಲ್ಲರಿಗೂ ತಿಳಿದಿದೆ. ಯಾವುದೇ ಪಿತೂರಿ ಇಲ್ಲ" ಎಂದು ಅವರು ಹೇಳಿದರು.

ಅಪಘಾತದ ತನಿಖೆಗಳು ನಡೆಯುತ್ತಿವೆ. ದೆಹಲಿಯಲ್ಲಿರುವ ವಿಮಾನ ಅಪಘಾತ ತನಿಖಾ ಬ್ಲಾಕ್ ಬಾಕ್ಸ್ ಪಡೆದುಕೊಂಡಿದೆ. ವಿವರವಾದ ತನಿಖೆಯನ್ನು ನಡೆಸುತ್ತಿದೆ, ಆದರೆ ಮಹಾರಾಷ್ಟ್ರ ಸಿಐಡಿ ಹೆಚ್ಚುವರಿ ತನಿಖೆಯನ್ನು ಪ್ರಾರಂಭಿಸಿದೆ.

ಈ ಘಟನೆಯು ನಿರ್ಣಾಯಕ ಸಮಯದಲ್ಲಿ ಎನ್‌ಸಿಪಿಯಲ್ಲಿ ನಿರ್ವಾತವನ್ನು ಉಂಟುಮಾಡಿದೆ. ಪಕ್ಷದ ಬಣಗಳ ನಡುವಿನ ಪುನರೇಕೀಕರಣದ ಮಾತುಕತೆಗಳು ಮತ್ತು ಉತ್ತರಾಧಿಕಾರದ ಬಗ್ಗೆ ಊಹಾಪೋಹಗಳು ಮಹಾರಾಷ್ಟ್ರ ರಾಜಕೀಯದಲ್ಲಿ ಪ್ರಾಬಲ್ಯ ಮುಂದುವರಿಸಿವೆ.

## ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಹಾಗೂ ಎನ್.ಪಿ.ಎಸ್. ಟ್ರೇಡರ್ಸ್ ಯೋಜನೆಯಡಿ ನೋಂದಾಯಿಸಿ

ಕೊಪ್ಪಳ ಫೆಬ್ರುವರಿ 02: ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಹಾಗೂ ಎನ್.ಪಿ.ಎಸ್. ಟ್ರೇಡರ್ಸ್ ಯೋಜನೆಯಡಿ ನೋಂದಾಯಿಸಿಕೊಳ್ಳುವಂತೆ ಕೊಪ್ಪಳ ಉಪ-ವಿಭಾಗದ ಕಾರ್ಮಿಕ ಅಧಿಕಾರಿ ಸುಧಾ ಗರಗ ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರವು ಅಸಂಘಟಿತ ವಲಯದ ಕಾರ್ಮಿಕರಿಗೆ ವೃದ್ಧಾಪ್ಯದಲ್ಲಿ ಮಾಸಿಕ ರೂ. 3000 ಗಳ ನಿಶ್ಚಿತ ಪಿಂಚಣಿ ಒದಗಿಸಿ ಆರ್ಥಿರ ಭದ್ರತೆ ಒದಗಿಸುವ ಉದ್ದೇಶದಿಂದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಹಾಗೂ ಎನ್.ಪಿ.ಎಸ್. ಟ್ರೇಡರ್ಸ್ ಯೋಜನೆಯನ್ನು ಜಾರಿಗೆ ತಂದಿರುತ್ತದೆ.

ಕೊಪ್ಪಳ ಜಿಲ್ಲೆಯಲ್ಲಿ ಈ ಯೋಜನೆಯಡಿಯಲ್ಲಿ ಅಸಂಘಟಿತ ವಲಯದ ಕಾರ್ಮಿಕರನ್ನು ನೋಂದಾಯಿಸಲು ಜನೇವರಿ 15 ರಿಂದ ಮಾರ್ಚ್ 15ರ ವರೆಗೆ "ವಿಶೇಷ ನೋಂದಣಿ ಅಭಿಯಾನ"ವನ್ನು ಹಮ್ಮಿಕೊಳ್ಳಲಾಗಿರುತ್ತದೆ. 18 ರಿಂದ 40 ರೊಳಗಿನ ವಯೋಮಾನದ ಅಸಂಘಟಿತ ವಲಯದ ಕಾರ್ಮಿಕರು ಈ ಯೋಜನೆಯಡಿ ನೋಂದಣಿ ಮಾಡಿಕೊಳ್ಳಬೇಕು. ಅಭ್ಯರ್ಥಿಗಳು ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಪಡೆಯು ವರಾಗಿರಬಾರದು. ಯೋಜನೆಯಡಿ ವಯಸ್ಸಿಗನುಗುಣವಾಗಿ ಮಾಸಿಕ ರೂ. 55 ರಿಂದ ರೂ. 200 ರವರೆಗೆ ವಂತಿಗೆ ಪಾವತಿ ಮಾಡಬೇಕು. ತಾವು ಪಾವತಿ ಮಾಡಿದಷ್ಟೆ ಕೇಂದ್ರ ಸರ್ಕಾರದ ಪಾವತಿಯು ಬ್ಯಾಂಕಖಾತೆಯಲ್ಲಿ ಆ ಮೊತ್ತವು ಸಂಗ್ರಹಿಸಲಾಗುತ್ತದೆ. ಪಾವತಿದಾರರಿಗೆ 60 ವರ್ಷ ಪೂರ್ಣಗೊಂಡ ನಂತರ ಮಾಸಿಕ ರೂ. 3000 ಗಳ ನಿಶ್ಚಿತ ಪಿಂಚಣಿ ಸೌಲಭ್ಯ ನೀಡಲಾಗುತ್ತದೆ. ಈ ಯೋಜನೆಯಡಿಯಲ್ಲಿ ಅಸಂಘಟಿತ ವಲಯದ ಎಲ್ಲಾ ಕಾರ್ಮಿಕರು, ಕಟ್ಟಡ ಮತ್ತು ಇತರೆ ನಿರ್ಮಾಣದ ಕಾರ್ಮಿಕರು, ಸ್ವ-ಸಹಾಯ ಗುಂಪಿನ ಸದಸ್ಯರು, ಅಂಗನವಾಡಿ ಮತ್ತು ಆಶಾ ಕಾರ್ಯ ಕರ್ತರು, ಮಧ್ಯಾಹ್ನದ ಬಿಸಿ ಊಟದ ಕಾರ್ಮಿಕರು, ಮೀನುಗಾರರು, ಬೀದಿ ಬದಿ ವ್ಯಾಪಾರಸ್ಥರು, ಚಿಲ್ಲರೆ ವ್ಯಾಪಾರಿಗಳು, ನರೇಗಾ ಕಾರ್ಮಿಕರು, ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರು, ಬೀಡಿ ಕಾರ್ಮಿಕರು, ಸ್ವ-ಉದ್ಯೋಗಿಗಳು ಹೀಗೆ ಇನ್ನಿತರ ಅಸಂಘಟಿತ ವಲಯದ ಕಾರ್ಮಿಕರು ತಮ್ಮ ಆಧಾರ ಕಾರ್ಡ್, ಬ್ಯಾಂಕ ಪಾಸ ಬುಕ್ ಹಾಗೂ ಮೊದಲ ತಿಂಗಳ ವಂತಿಗೆ ಯೊಂದಿಗೆ ತಮ್ಮ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ (ಸಿ.ಎಸ್.ಸಿ) ನೋಂದಣಿಯಾಗಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾರ್ಮಿಕ ಅಧಿಕಾರಿಯವರ ಕಛೇರಿ ಕೊಪ್ಪಳ ಅಥವಾ ಕಾರ್ಮಿಕ ನಿರೀಕ್ಷಕರ ಕಛೇರಿ ಕೊಪ್ಪಳ, ಕುಷ್ಟಗಿ, ಗಂಗಾವತಿ ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

(ಮುಖಪುಟದಿಂದ)

## ಮೂವರು ಉರ್ದು ಲೇಖಕರಿಗೆ ಮಹಬೂಬ್ ಅಲಿ ಖಾನ್ ಪ್ರಶಸ್ತಿ ಪ್ರದಾನ

ಪ್ರಸ್ತುತಪಡಿ ಸಲಾಯಿತು. ಮುಜೀಬ್ ಅಲಿ ಖಾನ್ ಅವರು ಸ್ವಾಗತ ಭಾಷಣ ಮಾಡಿ, ಕಾರ್ಯಕ್ರಮದ ಉದ್ದೇಶ ವನ್ನು ವಿವರಿಸಿದರು. ಡಾ. ಕೌಸರ್ ಪ್ರವೀಣ್ ಅವರುಪ್ರಶಸ್ತಿ ವಿಜೇತರ ಪರಿಚಯ ನೀಡಿದರು.

ಮುಖ್ಯ ಅತಿಥಿ ಇಂಜಿನಿಯರ್ ಮೊಹಮ್ಮದ್ ಆರಿಫ್ ಮಿರ್ಜಾ ಸೇರಿದಂತೆ ಅನೇಕ ಗಣ್ಯರು ಪ್ರಶಸ್ತಿ ವಿಜೇತರಿಗೆ ಅಭಿ ನಂದನೆ ಸಲ್ಲಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ನವಾಬ್ ಖಾನ್ ಅವರು ನಡೆಸಿದರು. ಅಂತಿಮವಾಗಿ ವಸೀಮ್ ಆರಿಫ್ ಅವರು ವಂದನಾರ್ಪಣೆ ಸಲ್ಲಿಸಿ ದರು. ನಂತರ ಅತಿಥಿಗಳಿಗೆ ಭೋಜನ ವ್ಯವಸ್ಥೆ ಮಾಡಲಾಗಿತ್ತು.

## ರಾಜ್ಯಾಧ್ಯಕ್ಷರಾಗಿ ಸೋಮಶೇಖರ್ ಗೌಡಪ್ಪನೌರ್ ನೇಮಕ

ಸ್ವೀಕರಿಸಿದ ಸಂದರ್ಭದಲ್ಲಿ ಮಾತನಾಡಿದ ಶ್ರೀ ಸೋಮಶೇಖರ್ ಗೌಡಪ್ಪನೌರ್, ಸಂಸ್ಥೆಯ ಕಾರ್ಮಿಕರ ಹಿತಕ್ಕಾಗಿ ಸದಾ ಪ್ರಾಮಾಣಿಕವಾಗಿ ಮತ್ತು ನಿಷ್ಠೆಯಿಂದ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಸೃಜನವಾಣಿ ಪತ್ರಿಕೆಯ ಮುಖ್ಯ ಸಂಪಾದಕರಾದ ಶ್ರೀ ಸುಧಾಕರ್ ಶರ್ಮಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## MNREGA ಕಾಯ್ದೆ ಹಕ್ಕು ಸ್ವರೂಪ ಬದಲಾವಣೆ ಖಂಡಿಸಿ ಪ್ರತಿಭಟನೆ

ಸ್ವರೂಪವನ್ನು ತೆಗೆದುಹಾಕಿ ಕೇವಲ ಸರ್ಕಾರದ ಅಣತಿಯ ಯೋಜನೆ ಯಾಗಿ ಹೊಸದಾಗಿ ವಿಕಸಿತ ಭಾರತ ರೋಜ್‌ಗಾರ ಮತ್ತು ಆಜೀವಿಕ ಮಿಷನ್ ಗ್ರಾಮೀಣ ಖಾತ್ರಿ ವಿಬಿ ಗ್ರಾಮ್‌ಜಿ ಕಾಯ್ದೆಯನ್ನು ಜಾರಿಗೊಳಿಸಿದೆ.

ಈ ಹೊಸ ಕಾಯ್ದೆಯಿಂದ ಕೂಲಿಕಾರರ ಮೇಲೆ ಹಲವು ದುಷ್ಪರಿಣಾಮಗಳು ಬೀರುತ್ತವೆ. ಉದಾ:-ರೈತರ ಋತುವಿನ ಸಂದರ್ಭದಲ್ಲಿ 60 ದಿನಗಳ ಕೃಷಿ ಕೆಲಸ ನಿರ್ಬಂದಿ ಸಿದನ್ನು ನೋಡಿದ್ದರೆ 125 ದಿನಗಳ ಕೆಲಸ ಸಿಗುವುದಿಲ್ಲ ಮತ್ತು ಕೆಲಸದಿಂದ ವಂಚಿತ ರಾಗುತ್ತಾರೆಂದು ತಮ್ಮ ಮನವಿಪತ್ರದಲ್ಲಿ ತಿಳಿಸಿದ್ದಾರೆ.

## ದೇಶದ ಅಭಿವೃದ್ಧಿಗೆ ಪೂರಕ ಬಜೆಟ್:ಮೀನಳ್ಳಿ

ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ದೇಶದ ಪ್ರಗತಿಗಾಗಿ ಅತ್ಯುತ್ತಮವಾಗಿ ಮಂಡಿಸಿದ ಬಜೆಟ್ ಇದಾಗಿದೆ. ದೇಶಕ್ಕೆ ಅನ್ನ ನೀಡುವ ರೈತರ ಆದಾಯ ದ್ವಿಗುಣಗೊಳಿಸಲು ಕೇಂದ್ರಸರ್ಕಾರ ಅನೇಕ ಯೋಜನೆಗಳನ್ನು ಬಜೆಟ್ ನಲ್ಲಿ ಘೋಷಿಸಿದೆ.

ದೇಶದ ಪ್ರತಿಯೊಬ್ಬ ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕಾಗಿ, ಪ್ರತಿಯೊಬ್ಬ ಮಹಿಳೆಯರು ಸ್ವಾವಲಂಬಿ ಬದುಕು ಸಾಗಿಸಿ ಇತರರಿಗೆ ಮಾದರಿಯಾಗಬೇಕು ಎನ್ನುವ ಕಲ್ಪನೆ ಇಟ್ಟುಕೊಂಡು ಅನೇಕ ಜನಪರ ಕಾರ್ಯಕ್ರಮಗಳನ್ನು ಘೋಷಿಸಿದೆ. ವಿಶೇಷವಾಗಿ ತೆಂಗು ಬೆಳೆಗಾರರಿಗೆ ಉತ್ತೇಜಿಸಲು, ಮೀನುಗಾರಿಕೆಗೆ ಹಾಗೂ ಪಶು ಸಂಗೋಪನೇಗೆ ಹಲವು ಉಪಕ್ರಮ ಸೇರಿದಂತೆ ಅನೇಕ ಯೋಜನೆಗಳನ್ನು ಪ್ರಕಟಿಸಿದೆ. ವಿಶೇಷವಾಗಿ ಶ್ರೀಗಂಧ ಬೆಳೆಯುವ ರೈತರಿರಿಗೆ, ಗೋಡಂಬಿ, ಕೊಕೊ ಬೆಳೆಗಳ ಉತ್ತೇಜನಕ್ಕೆ ಬಜೆಟ್ ನಲ್ಲಿ ಹಲವು ಯೋಜನೆಗಳನ್ನು ಘೋಷಿಸಿದ್ದಾರೆ. ಜಾನುವಾರು ಕ್ಷೇತ್ರದಲ್ಲಿ ಉದ್ಯಮಶೀಲತೆ ಉತ್ತೇಜಿಸುವ ಮೂಲಕ ಉದ್ಯೋಗಾವಕಾಶ ಸೃಷ್ಟಿಸುವುದು, ತೆಂಗಿನಕಾಯಿ ಉತ್ತೇಜನ ಯೋಜನೆ ಉತ್ಪಾದನೆ ಹೆಚ್ಚಿಸಲಿದೆ, ಸುಮಾರು1 ಕೋಟಿ ರೈತರು ಸೇರಿದಂತೆ 3 ಕೋಟಿ ಜನರಿಗೆ ಬೆಂಬಲ ನೀಡಲಿದೆ.

ಹೈದ್ರಾಬಾದ್ - ಬೆಂಗಳೂರು, ಬೆಂಗಳೂರು - ಚೆನ್ನೈ ಹೈಸ್ಪೀಡ್ ರೈಲು ಕಾರಿಡಾರ್ ಯೋಜನೆ ವರದಾನವಾಗಲಿದೆ. ಈಗಾಗಲೇ ರಾಜ್ಯದ ಹಲವು ವೇಗದ ರೈಲುಗಳು ಕಾರ್ಯಾಚರಿಸುತ್ತಿದ್ದು, ವಂದೇ ಭಾರತ್ ರೈಲುಗಳು ಕೂಡ ಸೇರ್ಪಡೆಯಾಗಿದೆ. ಈಗ ಹೈಸ್ಪೀಡ್ ರೈಲುಗಳು ರಾಜ್ಯಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ರೈಲು ಸಂಪರ್ಕದಲ್ಲಿ ಹೊಸ ಕ್ರಾಂತಿ ಆಗಲಿದೆ. 2030ರ ವೇಳೆಗೆ ಪ್ರೀಮಿಯಂ ಗ್ಲೋಬಲ್ ಬ್ರಾಂಡ್ ಆಗಿ ರೂಪಿಸುವ ಅಂಶವೂ ಮುಂಗಡ ಪತ್ರದಲ್ಲಿ ಸೇರಿದೆ ಎಂದು ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ, ಮಾರಾಟ ಮೇಳಕ್ಕೆ ಚಾಲನೆ

ಮೇಳದಲ್ಲಿ ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು ತಯಾರಿಸಿದ ವಿವಿಧ ಬಗೆಯ ಉತ್ಪನ್ನಗಳನ್ನು ಪ್ರದರ್ಶನ ಕ್ಕಿರಿಸಲಾಗಿತ್ತು.

ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ಜಿಲ್ಲಾ ಪಂಚಾ ಯತ್ ನ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಜಿಪಂ ಮುಖ್ಯ ಯೋಜನಾ ಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಯೋಜನಾ ನಿರ್ದೇಶಕ ಬಸವರಾಜ ಹಿರೇಮಠ, ಜಿಪಂ ಮುಖ್ಯ ಲೆಕ್ಕಾಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಎನ್‌ಆರ್ ಎಲ್‌ಎಂ ಯೋಜನೆಯ ಸಿಬ್ಬಂದಿಗಳು, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರುಗಳು ಇದ್ದರು.

## ನೀತಿ ಅಯೋಗ ಗುರುತಿಸಿರುವ ತಾಲೂಕಿನಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿ: ಬಿ. ಫೌಜಿಯಾ

ಅಭಿಯಾನ 1.0ರಲ್ಲಿ ಕಾಳಗಿ ಆಕಾಂಕ್ಷಿ ಬ್ಲಾಕ್ 6 ಸೂಚಕಗಳಲ್ಲಿ 5 ಸೂಚಕಗಳನ್ನು ಶೇ.100ರಷ್ಟು ಪ್ರಗತಿ ಸಾಧಿಸಿ ಬೆಳ್ಳಿ ಪದಕ ಪಡೆದಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದಲ್ಲದೆ 2.0 ಅಭಿಯಾನಕ್ಕೆ ಇದೇ ಪ್ರೇರಣೆಯಾಗಿದೆ ಎಂದರು.

ಸಂಪೂರ್ಣತಾ ಅಭಿಯಾನ 2.0ರಲ್ಲಿ ಶೇ.100ರಷ್ಟು ಗುರಿ ಸಾಧನೆಗೆ ಎಲ್ಲರು ಸಂಕಲ್ಪ ಮಾಡಬೇಕು. ಎಲ್ಲಾ ಇಲಾಖೆ ಗಳು ಪ್ರತಿ 3 ತಿಂಗಳಿಗೊಮ್ಮೆ ಕಾರ್ಯ ಯೋಜನೆ ರೂಪಿಸಬೇಕು.

ಪ್ರತಿ ವಾರ ಪರಿಶೀಲನೆ, ಕ್ಷೇತ್ರ ಭೇಟಿ ಹಾಗೂ ನೈಜ ಫಲಿತಾಂಶ ಆಧಾರಿತ ಅನುಷ್ಠಾನಕ್ಕೆ ತರವುದು ನಮ್ಮೆಲ್ಲರ ಆದ್ಯತೆ ಆಗಬೇಕು ಎಂದರಲ್ಲದೆ

ದಾಖಲೆಗಿಂತ ನೆಲಮಟ್ಟದ ಸಾಧನೆ ಮುಖ್ಯ ಎಂಬುದನ್ನು ಅವರು ಸ್ಪಷ್ಟಪಡಿ ಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾ ಯತಿಯ ಯೋಜನಾ ನಿರ್ದೇಶಕ ಜಗದೇವಪ್ಪ, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್, ಡಿ.ಎಚ್.ಓ ಡಾ. ಶರಣಬಸಪ್ಪ ಕ್ಯಾತನಾಳ, ಆಕಾಂಕ್ಷಿ ಬ್ಲಾಕ್ ಫೆಲೋ ಶಿವರಾಜ ಹೊಳ್ಕರ್ ಸೇರಿದಂತೆ ಕಾಳಗಿ, ಆಫಜಲಪೂರ ಹಾಗೂ ಶಹಾಬಾದ ತಾಲ್ಲೂಕಿನ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಿ.ಡಿ.ಪಿ.ಓ ಗಳು, ಸಹಾಯಕ ಕೃಷಿ ನಿರ್ದೇಶಕರುಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಹಾಗೂ ಜಿಲ್ಲಾ ಹಾಗೂ ಬ್ಲಾಕ್ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಇಂದು ಮಾನಸಿಕ ಆರೋಗ್ಯ ಶಿಬಿರ

ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

ತಪಾಸಣಾ ಶಿಬಿರದ ವಿವರ ಇಂತಿದೆ. ಫೆಬ್ರವರಿ 3 ರಂದು ಆಳಂದ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 6 ರಂದು ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ಫೆಬ್ರವರಿ 7 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಫೆಬ್ರವರಿ 10 ರಂದು ಚಿಂಚೋಳಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 13 ರಂದು ಅಫಜಲಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 17 ರಂದು ಚಿತ್ತಾಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 18 ರಂದು ದೇವಲ ಗಾಣಗಾಪುರ ಸಂಗಮ, ಫೆಬ್ರವರಿ 20 ರಂದು ಜೇವರ್ಗಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 21 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಫೆಬ್ರವರಿ 24 ರಂದು ಸೇಡಂ ತಾಲೂಕು ಸಾರ್ವಜನಿಕ ಆಸ್ಪತ್ರೆ, ಫೆಬ್ರವರಿ 25 ರಂದು ಶಹಾಬಾದ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಫೆಬ್ರವರಿ 27 ರಂದು ಕಾಳಗಿ ಸಮುದಾಯ ಆರೋಗ್ಯ ಕೇಂದ್ರ.

ಮಾನಸಿಕ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಗಳನ್ನು ಸಮುದಾಯದಲ್ಲಿ ಗುರುತಿಸಿ ಅವರನ್ನು ಈ ಶಿಬಿರ ನಡೆಯುವ ದಿನಾಂಕದಂದು ಕರೆತಂದು ತಜ್ಞರಿಗೆ ತೋರಿಸಿ ಚಿಕಿತ್ಸೆ ಕೊಡಿಸಬೇಕು ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ


# ಕರುನಾಡಿನಲ್ಲಿ ನೆಮ್ಮದಿಯ ಗ್ಯಾರಂಟಿ

## ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಬದ್ಧ





- ಮಂಗಳೂರಿನಲ್ಲಿ ಹಜ್ ಭವನ ನಿರ್ಮಾಣ
- 2024-25 ನೇ ಸಾಲಿನಲ್ಲಿ ಜೈನರ ಪ್ರಮುಖ ಧಾರ್ಮಿಕ ಸ್ಥಳಗಳ ಅಭಿವೃದ್ಧಿಗಾಗಿ ₹. 50 ಕೋಟಿ ಅನುದಾನ
- ಅಲ್ಪಸಂಖ್ಯಾತರ 169 ವಸತಿ ಶಾಲೆ / ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 25,000 ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ
- ಉಳ್ಳಾಲದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿನಿಯರಿಗಾಗಿ ವಸತಿ ಸಹಿತ ಪಿಯು ಕಾಲೇಜುಗಳ ಸ್ಥಾಪನೆ
- 50 ಹೊಸ ಮೌಲಾನಾ ಆಜಾದ್ ಶಾಲೆಗಳು ಆರಂಭ
- ಕೆಪಿಎಸ್ ಮಾದರಿಯಲ್ಲಿ ಉರ್ದು ಶಾಲೆಗಳ ಅಭಿವೃದ್ಧಿ
- ಬೆಂಗಳೂರಿನಲ್ಲಿ ಹಜ್ ಭವನಕ್ಕೆ ಬರುವ ಪ್ರವಾಸಿಗರಿಗೆ ಉಳಿದುಕೊಳ್ಳಲು ವ್ಯವಸ್ಥೆ ಕಲ್ಪಿಸಲು ಈ ಬಾರಿ ₹. 10 ಕೋಟಿ ಅನುದಾನ



## ಕರ್ನಾಟಕ ನವ ನಿರ್ಮಾಣಕ್ಕೆ ಗ್ಯಾರಂಟಿ ಸರ್ಕಾರ...

ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು